EMAIL : dairyadadaari@gmail.com ಸಂಪುಟ: 01 ಸಂಚಿಕೆ: 47
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ


# ಧೈರ್ಯದ ದಾರಿ

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಭಾನುವಾರ: 25-01-2026

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ● ಲೇಖನ ●

**ತಿಳುವಳಿಕೆ ಇಲ್ಲದವನನ್ನು ಒಪ್ಪಿಸುವುದು ಸುಲಭ.. ಹೆಚ್ಚು ತಿಳಿದವನನ್ನು ಒಪ್ಪಿಸುವುದು ಇನ್ನೂ ಸುಲಭ. ಆದರೆ ಸ್ವಲ್ಪ ತಿಳಿದುಕೊಂಡು ಅಹಂಕಾರ ಪಡುವ ಮನುಷ್ಯನನ್ನು ದೇವರಿಂದ ಕೂಡಾ ಒಪ್ಪಿಸಲು ಸಾಧ್ಯವಿಲ್ಲ..!!**



**ಅಜ್ಞಾನಿ:** ಏನೂ ತಿಳಿಯದವನಿಗೆ ವಿಷಯವನ್ನು ಮನವರಿಕೆ ಮಾಡಿಕೊಡುವುದು ಸುಲಭ, ಏಕೆಂದರೆ ಅವನು ಹೊಸದನ್ನು ಕಲಿಯಲು ಮುಕ್ತವಾಗಿರುತ್ತಾನೆ.
**ಜ್ಞಾನಿ:** ವಿಷಯದ ಆಳ-ಅಗಲ ತಿಳಿದವನನ್ನು ಒಪ್ಪಿಸುವುದು ಇನ್ನೂ ಸುಲಭ, ಏಕೆಂದರೆ ಅವನಿಗೆ ತರ್ಕ ಮತ್ತು ಸತ್ಯದ ಬೆಲೆ ಗೊತ್ತಿರುತ್ತದೆ.
**ಅಲ್ಪಜ್ಞಾನಿ:** ಆದರೆ "ನನಗೇ ಎಲ್ಲವೂ ಗೊತ್ತು" ಎಂಬ ಅಹಂಕಾರವಿರುವ, ಅರ್ಧಂಬರ್ಧ ತಿಳಿದವನನ್ನು ಸಾಕ್ಷಾತ್ ಸೃಷ್ಟಿಕರ್ತ ಬ್ರಹ್ಮದೇವನೂ ತಿದ್ದಲು ಸಾಧ್ಯವಿಲ್ಲ!
**ಈ ಮನಸ್ಥಿತಿಯ ಹಿಂದಿರುವ ಸತ್ಯಗಳು:**
**ಅಹಂಕಾರದ ಪರದೆ:** ಅಲ್ಪಜ್ಞಾನವು ಮನುಷ್ಯನ ಕಣ್ಣಿಗೆ ಅಹಂಕಾರದ ಪರದೆಯನ್ನು ಎಳೆಯುತ್ತದೆ. ಇದು ಹೊಸ ಆಲೋಚನೆಗಳನ್ನು ಸ್ವೀಕರಿಸದಂತೆ ತಡೆಯುತ್ತದೆ.
**ಕಲಿಯುವ ಆಸಕ್ತಿಯ ಕೊರತೆ:** ತಾನು ಪರಿಪೂರ್ಣ ಎಂದು ನಂಬಿದವನು ಎಂದಿಗೂ ತಿದ್ದಿಕೊಳ್ಳಲು ಬಯಸುವುದಿಲ್ಲ.
**ಅಪಾಯಕಾರಿ ವ್ಯಕ್ತಿತ್ವ:** "ಆಳವಿಲ್ಲದ ಕೊಡ ಅತಿ ಹೆಚ್ಚು ಸದ್ದು ಮಾಡುತ್ತದೆ" ಎಂಬ ಗಾದೆಯಂತೆ, ಇವರು ಸಮಾಜದಲ್ಲಿ ಗೊಂದಲವನ್ನೇ ಹೆಚ್ಚು ಸೃಷ್ಟಿಸುತ್ತಾರೆ.
ಇಂತಹ ವ್ಯಕ್ತಿಗಳಿಂದ ದೂರವಿರುವುದೇ ನೆಮ್ಮದಿಗೆ ದಾರಿ ಅಲ್ಲವೇ?


**-ಇಮ್ತಿಯಾಜ್ ಪಾಷಾ ಅಶ್ರಫಿ.**
**ಉಪನ್ಯಾಸಕರು,ಮಾನ್ವಿ**

# ಅಧಿಕಾರ ಕಿತ್ತಾಟದ ನಡುವೆಯೇ ಸಿಎಂ ಬಜೆಟ್ ಮಂಡಿಸುವುದು 'ಗ್ಯಾರಂಟಿ'

**ಬೆಂಗಳೂರು,ಜ.24–** ರಾಜ್ಯ ರಾಜಕಾರಣದಲ್ಲಿ ತೀವ್ರ ಕುತೂಹಲ ಕೆರಳಿಸಿದ ಅಧಿಕಾರಹಂಚಿಕೆಯ ಗೊಂದಲಗಳು ತಾತ್ಕಾಲಿಕವಾಗಿ ಶಮನವಾದಂತಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯ ಬಜೆಟ್ ಮಂಡಿಸುವುದು ಖಚಿತವಾಗಿದೆ. ಆರ್ಥಿಕ ಸಚಿವರೂ ಆಗಿರುವ ಸಿದ್ದರಾಮಯ್ಯನವರು ಇತ್ತಿಚೆಗೆ ಬಜೆಟ್ ಪೂರ್ವ ತಯಾರಿಯನ್ನು ಆರಂಭಿಸಿದ್ದಾರೆ. ಬಹುತೇಕ ಮಾರ್ಚ್ 6ರಂದು ಬಜೆಟ್ ಮಂಡನೆಯಾಗುವ ಸಾಧ್ಯತೆ ಇದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಾಂಗ್ರೆಸ್ ಹೈಕಮಾಂಡ್ ಮೇಲೆ ಒತ್ತಡ ಹಾಕಿ ನಾಯಕತ್ವ ಬದಲಾವಣೆಯಾಗಬೇಕು, ತಮಗೆ ಮುಖ್ಯಮಂತ್ರಿ ಹುದ್ದೆ ಬಿಟ್ಟುಕೊಡಬೇಕು ಎಂದು ಪಟ್ಟು ಹಿಡಿದಿದ್ದರು.

ಆದರೆ ಕಾಂಗ್ರೆಸ್ ಹೈಕಮಾಂಡ್ ಅಗತ್ಯ ಮನ್ನಣೆ ನೀಡಿದಂತೆ ಕಂಡುಬರುತ್ತಿಲ್ಲ. ಶಿವಕುಮಾರ್ ಅವರ ದೆಹಲಿ ಭೇಟಿ ವೇಳೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರತ್ಯೇಕ ಚರ್ಚೆಗೆ ಆಸ್ಪದ ನೀಡದೇ ಇರುವುದು ಬಹುತೇಕ ಗೊಂದಲಗಳಿಗೆ ತೆರೆ ಎಳೆದಂತಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ಹಂಚಿಕೆ ವಿಚಾರವಾಗಿ ಹೈಕಮಾಂಡ್ ಹೇಳಿದಂತೆ ಅದರಲ್ಲೂ ರಾಹುಲ್ ಗಾಂಧಿ ಹೇಳಿದಂತೆಯೇ ಕೇಳುತ್ತೇನೆ ಎಂದು ಪದೇ ಪದೇ ಹೇಳುತ್ತಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ರಾಹುಲ್ ಗಾಂಧಿ ಅವರು ಸಿದ್ದರಾಮಯ್ಯನವರಿಗೆ ಯಾವುದೇ ಸೂಚನೆ ನೀಡಿದಂತೆ ಕಂಡುಬಂದಿಲ್ಲ.



ಡಿ.ಕೆ.ಶಿವಕುಮಾರ್ ಅವರು ದೆಹಲಿಯಿಂದ ಬರಿಗೈಯಲ್ಲಿ ವಾಪಸ್ ಬರುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವಭಾವಿ ಸಭೆಗಳನ್ನು ಆರಂಭಿಸಿದರು. ಮೊದಲ ದಿನ ಆರ್ಥಿಕ ಇಲಾಖೆಯ ಅಧಿಕಾರಿಗಳ ಜೊತೆ ಚರ್ಚೆ ನಡೆಸಿದರು.

ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ವಿಶ್ವ ಆರ್ಥಿಕ ಸಮ್ಮೇಳನದಲ್ಲಿ ಭಾಗವಹಿಸಿದ್ದ ಡಿಸಿಎಂ ಅವರು, ತಮ ಶ್ರಮಕ್ಕೆ ಹೈಕಮಾಂಡ್‌ನಿಂದ ಪ್ರತಿಫಲ ಸಿಕ್ಕೆ ಸಿಗುತ್ತದೆ ಎಂದು ಹೇಳಿದ್ದಾರೆ. ಅದರ ಬೆನ್ನಲ್ಲೆ ಡಿ.ಕೆ ಸಹೋದರನಾಗಿರುವ ಮಾಜಿ ಸಂಸದ ಡಿ.ಕೆ.ಸುರೇಶ್, ತಮ ಸಹನೆ ಅಸಹಾಯಕತೆ ಅಲ್ಲ ಎಂದಿದ್ದಾರೆ. ಈ ಎಲ್ಲಾ ಗೊಂದಲಗಳು ಅಧಿಕಾರ ಹಂಚಿಕೆಯ ವಿಚಾರವನ್ನು ಮತ್ತೆ ಮುನ್ನಲೆಗೆ ತಂದಿದ್ದವು. ಆದರೆ ಮೂಲಗಳ ಪ್ರಕಾರ ಸದ್ಯಕ್ಕೆ ಯಾವುದೇ ಬದಲಾವಣೆ ಇಲ್ಲ. ಸಿದ್ದರಾಮಯ್ಯ ಬಜೆಟ್ ಮಂಡಿಸುವುದು ಖಚಿತ ಎಂದು ಹೇಳಲಾಗುತ್ತಿದೆ.

ಸಂಪುಟ ವಿಸ್ತರಣೆ: ರಾಜ್ಯ ಸರ್ಕಾರಕ್ಕೆ ಎರಡೂವರೆ ವರ್ಷ ತುಂಬಿದ ಹಿನ್ನೆಲೆಯಲ್ಲಿ ಸಚಿವ ಸಂಪುಟ ಪುನಾರಚನೆಯಾಗಬೇಕೆಂಬ ಒತ್ತಡಗಳಿದ್ದವು. ಆದರೆ ನಾಯಕತ್ವ ವಿವಾದವೇ ಗೊಂದಲಕಾರಿಯಾಗಿದ್ದರಿಂದ ಸಂಪುಟ ಪುನಾರಚನೆ ಮುಂದೂಡಿಕೆಯಾಗುತ್ತಿತ್ತು. ಸದ್ಯದ ಬೆಳವಣಿಗೆಯಲ್ಲಿ ಹೈಕಮಾಂಡ್ ಫೆಬ್ರವರಿಯಲ್ಲಿ ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಅವಕಾಶ ನೀಡಲಿದೆ ಎಂದು ಹೇಳಲಾಗುತ್ತಿದೆ.

ಮೂಲಗಳ ಪ್ರಕಾರ ಫೆ.22ರಂದು ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಆಗುವ ಸಾಧ್ಯತೆಗಳಿವೆ. ಒಂದು ವೇಳೆ ಹೈಕಮಾಂಡ್ ಸಂಪುಟ ಪುನಾರಚನೆಗೆ ಸಮತಿ ನೀಡಿದರೆ ನಾಯಕತ್ವ ಬದಲಾವಣೆ ಚರ್ಚೆಗಳು ನೇಪಥ್ಯಕ್ಕೆ ಸರಿಯಲಿವೆ. ಡಿ.ಕೆ.ಶಿವಕುಮಾರ್ ಅವರ ಕನಸಿಗೆ ತಣ್ಣೀರು ಎರಚಿದಂತಾಗುತ್ತದೆ. ಸಿದ್ದರಾಮಯ್ಯ ಅವರ ನಾಯಕತ್ವ ಅಬಾಧಿತವಾಗಿ 2028ರವರೆಗೂ ಮುಂದುವರೆದು ಮತ್ತೊಂದು ದಾಖಲೆ ನಿರ್ಮಾಣವಾಗುವ ಸಾಧ್ಯತೆ ಇದೆ.

## ಚಿತ್ತಾಪುರ : ಅಂಜುಮನ್ ಕಮಿಟಿ ಪಧಾದಿಕಾರಿಗಳ ನೇಮಕ



ಧೈರ್ಯದ ದಾರಿ

**ಲಿಂಗಸುಗೂರು,ಜ.24–** ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿ(ರಿ) ವತಿಯಿಂದ ಚಿತ್ತಾಪುರ ಗ್ರಾಮದ ಮಸೀದಿಯಲ್ಲಿ ನಡೆದ ಸಭೆಯಲ್ಲಿ ಚಿತ್ತಾಪುರ ಗ್ರಾಮದ ಕಮಿಟಿಯ ಗೌರವ ಅಧ್ಯಕ್ಷರಾಗಿ ರಹೇಮಾನ್ ಸಾಬ್ ಮುದ್ಗಲ್, ಅಧ್ಯಕ್ಷರಾಗಿ ಮಹಮ್ಮದ್ ರಫಿ ಜಿಗೇರಿ, ಉಪಾಧ್ಯಕ್ಷರಾಗಿ ಮಹಮ್ಮದ್ ರಫಿ ಮುಲ್ಲಾ, ಕಾರ್ಯಧ್ಯಕ್ಷರಾಗಿ ಇಮಾಮ್ ಸಾಬ್ ಬ್ಯಾಮಲಿ, ಪ್ರಧಾನ ಕಾರ್ಯದರ್ಶಿಯಾಗಿ ಹಸನ್ ಸಾಬ್ ಮುಲ್ಲಾ, ಖಜಾಂಚಿಯಾಗಿ ರಾಜ್ ಮಹಮ್ಮದ್ ಸುಂಕದ, ಸಹಕಾರ್ಯದರ್ಶಿಗಳಾಗಿ ಸೈಲ್ಲಿ ಮುಲ್ಲಾ, ರಿಯಾಜ್ ಅಹ್ಮದ್ ಐನಗುಡಿ, ಮೈಬುಬ್ ಸಾಬ್ ಐನಗುಡಿ, ಸದ್ದಾಂ ಬೆಳ್ಳಿಹಾಳ, ಬಂದೇನವಾಜ್ ಬಳಿಗಾರ್, ಶಾಮಿದಲಿ, ಬಂದೇನವಾಜ್ ಇಲಕಲ್ ಹಾಗೂ ಶಮಿರ್ ಇವರನ್ನ ಆಯ್ಕೆ ಮಾಡಲಾಯಿತು.

ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿಗೆ ಚಿತ್ತಾಪುರ ಗ್ರಾಮದಿಂದ ಜನಾಬ್ ರಹಿಮಾನ್ ಸಾಬ್ ಮುಲ್ಲಾ, ಜನಾಬ್ ದಸ್ತಗೀರ್ ಸಾಬ್ ಮುಲ್ಲಾ, ಜನಾಬ್ ಡಾ: ಅಬ್ದುಲ್ಲಾ ಖಾದರ್ ಖಾಜಿ, ಜನಾಬ್ ಅಬ್ದುಲ್ಲಾ ಖಾದರ್ ಮುಲ್ಲಾ & ಜನಾಬ್ ಬಾಬು ಬೀದರಕೋಟಿ ಇವರನ್ನ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿಯ ಪದಾಧಿಕಾರಿಗಳು, ಕಾರ್ಯಕಾರಿಸಮಿತಿಯ ಸದಸ್ಯರು ಹಾಗೂ ನೂತನವಾಗಿ ಆಯ್ಕೆಯಾದ ಅಂಜುಮನ್-ಎ-ಮುಸ್ಲಿಮೀನ್ ಚಿತ್ತಾಪುರ ಗ್ರಾಮದ ಕಮಿಟಿಯ ಸದಸ್ಯರು ಹಾಗೂ ಸಮುದಾಯದ ಗುರು ಹಿರಿಯರು ಸಹೋದರರು ಉಪಸ್ಥಿತರಿದ್ದರು.

## ಮಟಮಾರಿ ಗ್ರಾಮ ಪಂಚಾಯತ್ ಕೆಡಿಪಿ ಸಭೆ ಯಶಸ್ವಿ : ಪ್ರತಿಯೊಬ್ಬ ಅಧಿಕಾರಿ ಸೇವಾಮನೋಭಾವದಿಂದ ಕಾರ್ಯನಿರ್ವಹಿಸಲು ಸಲಹೆ

ಧೈರ್ಯದ ದಾರಿ




**ರಾಯಚೂರು,ಜ.24–** ತಾಲೂಕಿನ ಮಟಮಾರಿ ಗ್ರಾಮ ಪಂಚಾಯತ್ ವತಿಯಿಂದ ಮಟಮಾರಿ ಗ್ರಾಮದಲ್ಲಿ ಜನವರಿ 23ರ ಶುಕ್ರವಾರ ದಂದು ಗ್ರಾಮ ಪಂಚಾಯತ್ ವಿವಿಧ ಯೋಜನೆಗಳ ಕುರಿತು ತ್ರೈಮಾಸಿಕ ಪ್ರಗತಿ ಪರಿಶೀಲನಾ (ಕೆಡಿಪಿ) ಸಭೆಯನ್ನು ಯಶಸ್ವಿಯಾಗಿ ನಡೆಸಲಾಯಿತು.

ಸಭೆಯು ಗ್ರಾಮ ಪಂಚಾಯತ್ ಅಧ್ಯಕ್ಷೆ ಅಂಬಿಕಾ ಪ್ರಭುರಾಜ ಅವರ ಅಧ್ಯಕ್ಷತೆಯಲ್ಲಿ ಹಾಗೂ ಉಪಾಧ್ಯಕ್ಷರು ಮತ್ತು ಸ್ಥಾಯಿ ಸಮಿತಿ ಅಧ್ಯಕ್ಷರಾದ ಹುಸೇನ್ ಬಾಷಾ ಅವರ ಮಾರ್ಗದರ್ಶನದಲ್ಲಿ ನಡೆಸಲಾಯಿತು.

ಸಭೆಯಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಕ್ರಮವಾಗಿ ಆಹ್ವಾನಿಸಿ, ತಮ್ಮ ತಮ್ಮ ಇಲಾಖೆಗಳ ಪ್ರಗತಿ ವರದಿ, ಮುಂದಿನ ಕಾರ್ಯಯೋಜನೆಗಳು ಹಾಗೂ ಅನುಷ್ಠಾನದಲ್ಲಿರುವ ಕಾಮಗಾರಿಗಳ ಸ್ಥಿತಿಗತಿಗಳ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಲಾಯಿತು. ಈ ವೇಳೆ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಹುಸೇನ್ ಬಾಷಾ ಅವರು ಮಾತನಾಡಿ, ಸಾರ್ವಜನಿಕರೇ ಸರ್ಕಾರದ ಎಲ್ಲಾ ಇಲಾಖೆಗಳ ಮೂಲಾಧಾರ ಮತ್ತು ಹಕ್ಕುದಾರರು ಎಂಬ ಮನೋಭಾವದಿಂದ ಪ್ರತಿಯೊಬ್ಬ ಅಧಿಕಾರಿ ಸೇವಾಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಎಲ್ಲಾ ಇಲಾಖೆಗಳು ಸಾರ್ವಜನಿಕರ ಹಿತಾಸಕ್ತಿಯನ್ನು ಕೇಂದ್ರಬಿಂದುಗೊಳಿಸಿ ಕಾರ್ಯನಿರ್ವಹಿಸಬೇಕು. ಹಾಗೂ ಸರ್ಕಾರದ ಯೋಜನೆಗಳ ಕುರಿತು ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಫಲಾನುಭವಿಗಳಿಗೆ ಯೋಜನೆಗಳ ಸದುಪಯೋಗ ತಲುಪುವಂತೆ ಕ್ರಮವಹಿಸಬೇಕು ಎಂದರು.

ಶಿಕ್ಷಣ ಇಲಾಖೆಯ ಕುರಿತು ಅವರು ಉಲ್ಲೇಖಿಸಿ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಒದಗಿಸಿದಲ್ಲಿ ಮಾತ್ರ 10ನೇ ತರಗತಿಯಲ್ಲಿ ಉತ್ತಮ ಫಲಿತಾಂಶ ಸಾಧ್ಯವಾಗುತ್ತದೆ. ಗುಣಮಟ್ಟದ ಶಿಕ್ಷಣವೇ ಸುಶಿಕ್ಷಿತ ಮತ್ತು ಸದೃಢ ಸಮಾಜ ನಿರ್ಮಾಣಕ್ಕೆ ದಾರಿ ಮಾಡಿಕೊಡುತ್ತದೆ ಎಂದು ಅಭಿಪ್ರಾಯಪಟ್ಟರು.

ಸಾರ್ವಜನಿಕರಿಗೆ ಉತ್ತಮ ಚಿಕಿತ್ಸೆ, ಸಮಯೋಚಿತ ಸ್ಪಂದನೆ ಹಾಗೂ ರೋಗಿಗಳೊಂದಿಗೆ ಶಿಷ್ಟಾಚಾರಪೂರ್ಣ ಮತ್ತು ಮಾನವೀಯ ವರ್ತನೆ 2ನೇಪುಟಕ್ಕೆ ►

# ಗಣರಾಜ್ಯೋತ್ಸವಕ್ಕೆ ಪೊಲೀಸರ ಹದ್ದಿನ ಕಣ್ಣು : ಮೆಟ್ರೋ-ಬಸ್ ಬಳಸುವಂತೆ ಸೂಚನೆ

**ಬೆಂಗಳೂರು, ಜ.24–** ಗಣರಾಜ್ಯೋತ್ಸವದಂದು ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಹದ್ದಿನ ಕಣ್ಣಿಡಲಾಗಿದ್ದು, ಭದ್ರತೆಗಾಗಿ ಅಧಿಕಾರಿಗಳು ಸೇರಿದಂತೆ 2 ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಇಂದಿಲ್ಲಿ ತಿಳಿಸಿದರು.

ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪರೇಡ್ ನಡೆಯುವ ಮಾಣಿಕ್ ಷಾ ಮೈದಾನಕ್ಕೆ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಸುರಕ್ಷತೆಗಾಗಿ 100 ಸಿ.ಸಿ. ಕ್ಯಾಮೆರಾ ಹಾಗೂ ನಾಲ್ಕು ಬ್ಯಾಗೇಜ್ ಸ್ಕ್ಯಾನರ್ ಮತ್ತು ವ್ಯವಸ್ಥಿತ ಸಂಚಾರ ನಿಯಂತ್ರಣ ವ್ಯವಸ್ಥೆ ಮಾಡಲಾಗಿದೆ ಎಂದರು.

ಹೆಚ್ಚುವರಿಯಾಗಿ ಕೆಎಸ್‌ಆರ್‌ಪಿ, ಸಿಎಆರ್ ಸೇರಿದಂತೆ 37 ತುಕಡಿಗಳನ್ನು ನಿಯೋಜಿಸಲಾಗಿದ್ದು, ಯಾವುದೇ ಸಣ್ಣಪುಟ್ಟ ಘಟನೆ ನಡೆಯಲು ಪೊಲೀಸರು ಅವಕಾಶ ನೀಡುವುದಿಲ್ಲ ಎಂದು ಅವರು ತಿಳಿಸಿದರು.ಗಣರಾಜ್ಯೋತ್ಸವ ದಿನಾಚರಣೆಯ ಸಂದರ್ಭದಲ್ಲಿ ಯಾವುದೇ ಆಕಸ್ಮಿಕ ವಿಪತ್ತು ಸಂಭವಿಸಿದಲ್ಲಿ ತಕ್ಷಣ ಪ್ರತಿಕ್ರಿಯಿಸಲು ಅಗತ್ಯವಿರುವಷ್ಟು ಆಂಬ್ಯುಲೆನ್ಸ್‌ಗಳನ್ನು ವೈದ್ಯಕೀಯ ಹಾಗೂ ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳಲಾಗಿರುತ್ತದೆ ಹಾಗೂ ನಗರದ ಹಲವು ಆಸ್ಪತ್ರೆಗಳನ್ನು ಗುರುತಿಸಿ, ಸಾಕಷ್ಟು ಸಂಖ್ಯೆಯಲ್ಲಿ ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ.

ಗಣರಾಜ್ಯೋತ್ಸವದಂದು ಯಾವುದೇ ಸಹಾಯಕ್ಕಾಗಿ ಪೊಲೀಸರು ಸದಾ ನಿಮ್ಮೊಂದಿಗಿರುತ್ತಾರೆ. ದಯವಿಟ್ಟು ಸ್ಥಳದಲ್ಲಿರುವ ಪೊಲೀಸರನ್ನು ಸಂಪರ್ಕಿಸಿ ಅಥವಾ ಪೊಲೀಸ್ ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡಬಹುದು ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.ಆಕಸ್ಮಿಕ ಬೆಂಕಿ ಅವಘಡಗಳನ್ನು ನಿಭಾಯಿಸಲು ಅಗ್ನಿಶಾಮಕ ವಾಹನಗಳೊಂದಿಗೆ ಸಾಕಷ್ಟು ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳಲಾಗಿದೆ. ಪರೇಡ್‌ಗೆ ಆಗಮಿಸುವ ಅತಿಗಣ್ಯ, ಗಣ್ಯ, ಇತರೆ ಆಹ್ವಾನಿತರು ಹಾಗೂ ಸಾರ್ವಜನಿಕರಿಗೆ ಪ್ರತ್ಯೇಕವಾಗಿ ಆಸನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.

ಜನ ಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳಿಗೆ ವೇದಿಕೆಯ ಬಲಭಾಗದಲ್ಲಿ ಮತ್ತು ಮಾಧ್ಯಮದವರಿಗೆ ವೇದಿಕೆಯ ಎಡಭಾಗದಲ್ಲಿ ಆಸನ ವ್ಯವಸ್ಥೆಯನ್ನು ಮಾಡಲಾಗಿದೆ. ಕಾರ್ಯಕ್ರಮದ ನೇರ ಪ್ರಸಾರವನ್ನು ದೂರದರ್ಶನದಲ್ಲಿ ಪ್ರಸಾರ ಮಾಡಲು ಕ್ರಮ ವಹಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವವರು ಪ್ರವೇಶ ದ್ವಾರದಲ್ಲಿ ಆಹ್ವಾನ ಪತ್ರಿಕೆಯೊಂದಿಗೆ ಕಡ್ಡಾಯವಾಗಿ ಅರ್ಹ ಗುರುತಿನ ಚೀಟಿಯೊಂದಿಗೆ ಹಾಜರಾಗುವುದು. ಸಾರ್ವಜನಿಕರಿಗಾಗಿ ಇರುವ ವೀಕ್ಷಣಾ ಗ್ಯಾಲರಿಯನ್ನು ವಿಸ್ತರಿಸಿ ಹೆಚ್ಚು ಸಾರ್ವಜನಿಕರು ಕಾರ್ಯಕ್ರಮ ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರಿಗೆ ಗಣರಾಜ್ಯೋತ್ಸವ ದಿನಾಚರಣೆ ವೀಕ್ಷಿಸಲು ಆನ್‌ಲೈನ್ ಮೂಲಕ 2000 ಇ-ಪಾಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.
ಆಸಕ್ತರು ಸೇವಾ ಸಿಂಧು ವೆಬ್‌ಸೈಟ್‌ನಲ್ಲಿ ಇ-ಪಾಸ್ ಅನ್ನು ಪಡೆಯಬಹುದಾಗಿರುತ್ತದೆ. ಭದ್ರತಾ ದೃಷ್ಟಿಯಿಂದ ಪೆರೇಡ್‌ಗೆ ಬರುವ ಎಲ್ಲಾ ಆಹ್ವಾನಿತರು ಹಾಗೂ ಸಾರ್ವಜನಿಕರು ಮೊಬೈಲ್ ಫೋನ್, ಹೆಲೆಟ್, ಕ್ಯಾಮೆರಾ, ರೇಡಿಯೋ, ಕೊಡೆ ಮುಂತಾದ ವಸ್ತುಗಳನ್ನು ಜೊತೆಯಲ್ಲಿ ತೆಗೆದುಕೊಂಡು ಹೋಗದಂತೆ ಕೋರಲಾಗಿದೆ.ಇಂತಹ ವಸ್ತುಗಳನ್ನು ಹೊಂದಿರುವವರನ್ನು ಒಳಗೆ ಬಿಡಲಾಗುವುದಿಲ್ಲ. ಎಲ್ಲರೂ ಬೆಳಗ್ಗೆ ಎಂಟು ಗಂಟೆಯ ಒಳಗೆ









ಮೈದಾನದಲ್ಲಿ ಆಸೀನರಾಗುವಂತೆ ಕೋರಲಾಗಿದೆ.ಕುಡಿಯುವ ನೀರಿನ ವ್ಯವಸ್ಥೆ ಮತ್ತು ಶೌಚಾಲಯಗಳನ್ನು ಜಿಬಿಎ ವತಿಯಿಂದ ಮಾಡಲಾಗಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳಲು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ. ಮಾಡಿಕೊಂಡಿದ್ದಾರೆ. ಮಾಣಿಕ್ ಷಾ ಪರೇಡ್ ಮೈದಾನ ಹಾಗೂ ಸುತ್ತಮುತ್ತ ವಾಹನಗಳ ನಿಲುಗಡೆಗೆ ಸ್ಥಳಾವಕಾಶ ಕೊರತೆ ಇರುವುದರಿಂದ ಹಾಗೂ ಸಂಚಾರ ದಟ್ಟಣೆ ಕಡಿಮೆ ಮಾಡಲು ಸಾರ್ವಜನಿಕರು ಸಾರ್ವಜನಿಕ ಸಾರಿಗೆ ವ್ಯವಸ್ಥೆ ಮತ್ತು ಮೆಟ್ರೊ ಸೇವೆ ಬಳಸಬೇಕು ಎಂದು ಅವರು ಸಲಹೆ ನೀಡಿದ್ದಾರೆ. 26 ರಂದು ಬೆಳಿಗ್ಗೆ 8.58 ಗಂಟೆಗೆ ರಾಜ್ಯಪಾಲರು ಮೈದಾನಕ್ಕೆ ಆಗಮಿಸುತ್ತಾರೆ. ಅವರಿಗೆ ಭಾರತೀಯ ರಕ್ಷಣಾಸೇವೆಯ ಮೂವರು ಹಿರಿಯ ಅಧಿಕಾರಿಗಳನ್ನು ಪರಿಚಯಿಸಲಾಗುತ್ತದೆ.ರಾಜ್ಯಪಾಲರು ಬೆಳಿಗ್ಗೆ 9.00 ಗಂಟೆಗೆ ರಾಷ್ಟ್ರ ಧ್ವಜಾರೋಹಣ ನೆರವೇರಿಸುತ್ತಾರೆ.ಧ್ವಜಾರೋಹಣ ನಂತರ ಗೌರವರಕ್ಷೆ ಸ್ವಿಕರಿಸಿ ನಂತರ ನಾಡಿನ ಜನತೆಗೆ ಗಣರಾಜ್ಯೋತ್ಸವದ ಸಂದೇಶ ನೀಡುತ್ತಾರೆ.ಕಳೆದ 3 ದಿನಗಳ ಕಾಲ ಸತತವಾಗಿ ರಿಹರ್ಸಲ್ ನಡೆಸಲಾಗುತ್ತಿದೆ. 2ನೇಪುಟಕ್ಕೆ►

ಮೊದಲನೇ ಪುಟದಿಂದ

## ಮಟಮಾರಿ ಗ್ರಾಮ ಪಂಚಾಯತ್ ಕೆಡಿಪಿ ಸಭೆ ಯಶಸ್ವಿ : ಪ್ರತಿಯೊಬ್ಬ ಅಧಿಕಾರಿ ಸೇವಾಮನೋಭಾವದಿಂದ ಕಾರ್ಯನಿರ್ವಹಿಸಲು ಸಲಹೆ

ಕಡ್ಡಾಯವಾಗಿರಬೇಕು. ಎಲ್ಲಾ ಸರ್ಕಾರಿ ಕಚೇರಿ ಆವರಣಗಳು, ಪ್ರಮುಖ ರಸ್ತೆ ಬದಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಗಿಡ ನೆಡುವ ಕಾರ್ಯಕ್ರಮಗಳನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ನಿರ್ದೇಶನ ನೀಡಿದರು ಕಂದಾಯ ಇಲಾಖೆಯಿಂದ ಗ್ರಾಮ ಲೆಕ್ಕಾಧಿಕಾರಿಗಳು ಪಿಂಚಣಿ, ಕೃಷಿ ಭೂಮಿ ವರ್ಗಾವಣೆ ಸೇರಿದಂತೆ ವಿವಿಧ ಕಂದಾಯ ಸೇವೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿ, ಜನರಿಗೆ ಸುಲಭವಾಗಿ ಸೇವೆಗಳು ಲಭ್ಯವಾಗುವಂತೆ ಕ್ರಮವಹಿಸಬೇಕು ಎಂದರು.ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಅಂಗನವಾಡಿ ಮಕ್ಕಳಿಗೆ ಪೌಷ್ಟಿಕ ಆಹಾರ ಒದಗಿಸುವುದು, ಗುಣಮಟ್ಟದ ಪೂರ್ವ ಪ್ರಾಥಮಿಕ ಶಿಕ್ಷಣ ನೀಡುವುದು. ಹಾಗೂ ಮಹಿಳಾ ಸಬಲೀಕರಣಕ್ಕೆ ಸಂಬಂಧಿಸಿದ ಜಾಗೃತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವಂತೆ ಸೂಚಿಸಲಾಯಿತು.ಸಭೆಯ ಅಂತ್ಯದಲ್ಲಿ ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಿ, ಸಾರ್ವಜನಿಕರ ಹಿತಾಸಕ್ತಿಗೆ ಆದ್ಯತೆ ನೀಡುತ್ತಾ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ನಿರ್ದೇಶನ ನೀಡಲಾಯಿತು.ಇದೇ ಸಂದರ್ಭದಲ್ಲಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷರಾದ ಹುಲಿಗೆಮ್ಮ ನರಸಣ್ಣ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶೇಖರಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

## ಗಣರಾಜ್ಯೋತ್ಸವಕ್ಕೆ ಪೊಲೀಸರ ಹದ್ದಿನ ಕಣ್ಣು ಮೆಟ್ರೋ-ಬಸ್ ಬಳಸುವಂತೆ ಸೂಚನೆ

ಈ ಬಾರಿಯ ಪಥಸಂಚಲನದಲ್ಲಿ ಆರ್ಮಿ, ಏರ್‌ಫೋರ್ಸ್, ಸಿಆರ್‌ಪಿಎಫ್ ಮಹಿಳಾ ತಂಡ, ವಿಶೇಷವಾಗಿ ತಮಿಳುನಾಡು ರಾಜ್ಯ ಪೊಲೀಸ್, ಸ್ಕೌಟ್ ಅಂಡ್ ಗೈಡ್, ಎನ್‌ಸಿಸಿ, ಸೇವಾದಳ ಹಾಗೂ ವಿವಿಧ ಶಾಲೆಗಳ ಮಕ್ಕಳನ್ನೊಳಗೊಂಡಂತೆ ಕವಾಯತು ಮತ್ತು ಬ್ಯಾಂಡ್‌ನ ಒಟ್ಟು 37 ತುಕಡಿಗಳಲ್ಲಿ ಸುಮಾರು 1100 ಮಂದಿ ಭಾಗವಹಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು. ಶಾಲಾ ಮಕ್ಕಳ ಎರಡು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸುಮಾರು 1400 ಮಕ್ಕಳು ಭಾಗವಹಿಸಲಿದ್ದಾರೆ.ಪೊಲೀಸ್ ಇಲಾಖಾ ವತಿಯಿಂದ ಒಂದು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಾಂಸ್ಕೃತಿಕ ಕಾರ್ಯಕ್ರಮಗಳ ನಂತರ ರಾಜ್ಯಪಾಲರಿಂದ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮವಿರುತ್ತದೆ ಎಂದು ಅವರು ಹೇಳಿದರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಗೀತಾ ಭತ್ತದ್ ತಂಡದವರಿಂದ ನಾಡಗೀತೆ ಹಾಗೂ ರೈತಗೀತೆ, ಪಾಲಿಕೆ ಶಾಲಾ ಮಕ್ಕಳ ವತಿಯಿಂದ ಸಂಕ್ರಾತಿ ಸಂಭ್ರಮ, ಬಾಗಲಗುಂಟೆ ಸರ್ಕಾರಿ ಶಾಲಾ ಮಕ್ಕಳಿಂದ ಭಾರತದ ಏಕೀಕರಣ ಮತ್ತು ನವಭಾರತ ಹಾಗೂ ಪೊಲೀಸ್ ಇಲಾಖೆಯಿಂದ ಸಾಮೂಹಿಕ ವಾದ್ಯಮೇಳ ನಡೆಯಲಿದೆ.ಜ.26ರಂದು ಪರೇಡ್ ಮೈದಾನದ ಸುತ್ತಮುತ್ತ ಸಂಚಾರ ಬದಲಾವಣೆ

ಗಣರಾಜ್ಯೋತ್ಸವದ ಅಂಗವಾಗಿ ಮಾಣಿಕ್ ಷಾ ಮೈದಾನದಲ್ಲಿ ನಡೆಯಲಿರುವ ಪರೇಡ್‌ಗೆ ನಗರ ಸಂಚಾರ ಪೊಲೀಸರು ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಕವಾಯತು ಮೈದಾನದ ಒಳಗಡೆ ಮತ್ತು ಸುತ್ತಮುತ್ತ ಸಂಚಾರ ಬಂದೋಬಸ್ತ್ ಮಾಡಿದ್ದಾರೆ.

ಕಾರ್ ಪಾಸ್‌ಗಳನ್ನು ಹೊಂದಿರುವ ಎಲ್ಲಾ ಆಹ್ವಾನಿತರು ಅವರುಗಳಿಗೆ ನಿಗದಿಪಡಿಸಿದ ಗೇಟ್‌ಗಳಲ್ಲಿ ಇಳಿದುಕೊಳ್ಳುವುದು ಹಾಗೂ ನಿಗದಿಪಡಿಸಿರುವ ಸ್ಥಳಗಳಲ್ಲಿ ವಾಹನಗಳನ್ನು ನಿಲುಗಡೆ ಮಾಡಬೇಕಿದೆ.ತುರ್ತು ಸೇವಾ ವಾಹನಗಳಾದ ಅಂಬುಲೆನ್ಸ್, ಅಗ್ನಿಶಾಮಕ ದಳದ ವಾಹನಗಳು, ನೀರಿನ ಬಂಕರ್, ಕೆ.ಎಸ್.ಆರ್.ಪಿ., ಕ್ಯೂ.ಆರ್.ಟಿ, ಜಿಬಿಎ ಹಾಗೂ ಪಿ.ಡಬ್ಲ್ಯೂಡಿ ವಾಹನಗಳು ಪ್ರವೇಶ ದ್ವಾರ-2 ರ ಮುಖಾಂತರ ಪರೇಡ್ ಮೈದಾನದ ಒಳಗೆ ಪ್ರವೇಶಿಸಿ ನಂತರ ಫೋರ್ಟ್ ವಾಲ್ ಹಿಂಭಾಗದಲ್ಲಿ ವಾಹನಗಳನ್ನು ನಿಲುಗಡೆ ಮಾಡಬಹುದಾಗಿದೆ.

ಕಾರ್ಯಕ್ರಮಕ್ಕೆ ಬರುವ ಎಲ್ಲಾ ಮಾಧ್ಯಮದವರ ವಾಹನಗಳು ಪ್ರವೇಶ ದ್ವಾರ-4ರ ಮೂಲಕ ಒಳ ಪ್ರವೇಶಿಸಿ ಮೈದಾನದ ಪೂರ್ವ ಭಾಗದಲ್ಲಿ ನಿಗದಿತ ಸ್ಥಳದಲ್ಲಿ ವಾಹನ ನಿಲುಗಡೆ ಮಾಡಬಹುದಾಗಿದೆ.ಜ. 26ರ ಬೆಳಗ್ಗೆ 08-30 ಗಂಟೆಯಿಂದ ಬೆಳಗ್ಗೆ 10-30 ರ ವರೆಗೆ ಕಬ್ಬನ್ ರಸ್ತೆಯಲ್ಲಿ ಬಿ.ಆರ್.ವಿ ಜಂಕ್ಷನ್ ನಿಂದ ಕಾಮರಾಜರಸ್ತೆ ಜಂಕ್ಷನ್‌ವರೆಗೆ ಎರಡೂ ದಿಕ್ಕುಗಳಲ್ಲಿನ ಸಂಚಾರವನ್ನು ನಿರ್ಬಂಧಿಸಿ ಈ ಕೆಳಕಂಡಂತೆ ಪರ್ಯಾಯ ಮಾರ್ಗದಲ್ಲಿ ಸಂಚರಿಸುವ ವ್ಯವಸ್ಥೆ ಮಾಡಲಾಗಿದೆ.

ಇನ್‌ಫೆಂಟ್ರಿ ರಸ್ತೆಯಲ್ಲಿ ಮಣಿಪಾಲ್ ಸೆಂಟರ್ ಕಡೆಗೆ ಸಂಚರಿಸುವ ವಾಹನಗಳು ನೇರವಾಗಿ ಇನ್ಫೆಂಟ್ರಿರಸ್ತೆ ಸಫೀನಾ ಪ್ಲಾಜಾ ಬಳಿ ಎಡತಿರುವು ಪಡೆದು ಮೈನ್‌ಗಾರ್ಡ್ ರಸ್ತೆ- ಆಲೀಸ್ ಸರ್ಕಲ್-ಡಿಸ್ಪೆನ್ಸರಿ ರಸ್ತೆ-ಕಾಮರಾಜರಸ್ತೆ ಮತ್ತು ಡಿಕನ್ಸನ್ ರಸ್ತೆ ಜಂಕ್ಷನ್‌ನಲ್ಲಿ ಬಲಕ್ಕೆ ತಿರುವು ಪಡೆದು ಕಾಮರಾಜ ರಸ್ತೆ- ಕಬ್ಬನ್‌ರಸ್ತೆ ಮತ್ತು ಕಾಮರಾಜ ರಸ್ತೆ ಜಂಕ್ಷನ್ನಲ್ಲಿ ಎಡಕ್ಕೆ ತಿರುವು ಪಡೆದು, ಕಬ್ಬನ್ ರಸ್ತೆ ಮುಖಾಂತರ ಮಣಿಪಾಲ್ ಸೆಂಟರ್ ಕಡೆಗೆ ಸಾಗಬಹುದಾಗಿದೆ.ಕಬ್ಬನ್ ರಸ್ತೆಯಲ್ಲಿ, ಮಣಿಪಾಲ್ ಸೆಂಟರ್ ಜಂಕ್ಷನ್‌ನಿಂದ ಬಿ.ಆರ್.ವಿ. ಜಂಕ್ಷನ್ ಕಡೆಗೆ ಬರುವ ವಾಹನಗಳ ಸಂಚಾರವನ್ನು ಮಣಿಪಾಲ್ ಸೆಂಟರ್ ಬಳಿ ನಿರ್ಬಂಧಿಸಿದ್ದು, ಸದರಿ ವಾಹನಗಳು ವೆಬ್ ಜಂಕನ್ ಬಳಿ ಬಲ ತಿರುವು ಪಡೆದು ಎಂ.ಜಿ. ರಸ್ತೆಯ ಮೂಲಕ ಮೆಯೋ ಹಾಲ್, ಕಾವೇರಿ ಎಂಪೋರಿಯಂ, ಅನಿಲ್ ಕುಂಬ್ಳೆ ವೃತ್ತದಲ್ಲಿ ಬಲ ತಿರುವು ಪಡೆದು ಮುಂದೆ ಸಾಗಬಹುದು.ಅನಿಲ್‌ಕುಂಬ್ಳೆ ವೃತ್ತದಿಂದ ಕಬ್ಬನ್‌ರಸ್ತೆ ಕಡೆಗೆ ಬರುವ ವಾಹನಗಳು ನೇರವಾಗಿ ಸೆಂಟ್ರಲ್ ಸ್ಟ್ರೀಟ್ನಲ್ಲಿ ಸಾಗಿ, ಬಲಕ್ಕೆ ತಿರುವು ಪಡೆದು-ಇನ್ಫೆಂಟ್ರಿರಸ್ತೆ- ಸಫೀನಾ ಪ್ಲಾಜಾ-ಎಡಕ್ಕೆತಿರುವು ಪಡೆದು ಮೈನ್‌ಗಾರ್ಡ್ ರಸ್ತೆ-ಆಲಿ ಸರ್ಕಲ್-ಡಿಸ್ಪೆನ್ಸರಿರಸ್ತೆ ಕಾಮರಾಜರಸ್ತೆ ಮತ್ತು ಡಿಕನ್ಸನ್ ರಸ್ತೆ ಜಂಕ್ಷನ್‌ನಲ್ಲಿ ಬಲಕ್ಕೆ ತಿರುವು ಪಡೆದು ಕಾಮರಾಜ ರಸ್ತೆ- ಕಬ್ಬನ್ ರಸ್ತೆ ಮತ್ತು ಕಾಮರಾಜ ರಸ್ತೆ ಜಂಕ್ಷನ್ ನಲ್ಲಿ ಎಡಕ್ಕೆ ತಿರುವು ಪಡೆದು, ಕಬ್ಬನ್ ರಸ್ತೆ ಮುಖಾಂತರ ಮಣಿಪಾಲ್ ಸೆಂಟರ್ ಕಡೆಗೆ ಸಾಗಬಹುದಾಗಿದೆ.ವಾಹನ ನಿಲುಗಡೆ ನಿಷಿದ್ಧ ರಸ್ತೆಗಳು:ಸೆಂಟ್ರಲ್ ಸ್ಟ್ರೀಟ್, ಅನಿಲ್ ಕುಂಬ್ಳೆ ವೃತ್ತದಿಂದ ಶಿವಾಜಿನಗರ ಬಸ್ ನಿಲ್ದಾಣದವರೆಗೆ. ಕಬ್ಬನ್ ರಸ್ತೆ, ಸಿ.ಟಿ.ಓ. ವತ್ತ ದಿಂದ ಕೆ.ಆರ್.ರಸ್ತೆಯಿಂದ ಕಬ್ಬನ್ ರಸ್ತೆ ಜಂಕ್ಷನ್ ಗಳಲ್ಲಿ ವಾಹನ ನಿಲುಗಡೆ ನಿಷೇಧಿಸಲಾಗಿದೆ.

## ಮತ್ತೊಂದು ಭಾಷಣ ಬಡಿದಾಟ

**ಬೆಂಗಳೂರು, ಜ. 24–** ರಾಜ್ಯ ಸರ್ಕಾರ ಮತ್ತು ರಾಜ್ಯಪಾಲರ ನಡುವೆ ಮತ್ತೊಂದು ಭಾಷಣ ಬಡಿದಾಟ ನಡೆದಿದೆ.

ಗಣರಾಜ್ಯೋತ್ಸವ ಸಂದರ್ಭದಲ್ಲಿ ತಾವು ವಾಚಿಸುವ ಭಾಷಣದಲ್ಲಿ ಕೇಂದ್ರ ಸರ್ಕಾರವನ್ನು ಟೀಕಿಸುವ ಅಂಶಗಳಿದ್ದರೆ ಆ ಭಾಷಣವನ್ನು ಓದಲ್ಲ ಎಂಬ ಸಂದೇಶವನ್ನು ರಾಜ್ಯಪಾಲರು ರಾಜ್ಯ ಸರ್ಕಾರಕ್ಕೆ ಕಳುಹಿಸಿದ್ದಾರೆ.

ವಿಧಾನ ಮಂಡಲದ ಜಂಟಿ ಅಧಿವೇಶನದಲ್ಲಿ ಸರ್ಕಾರ ಸಿದ್ಧಪಡಿಸಿದ್ದ ಭಾಷಣದಲ್ಲಿ ಕೇಂದ್ರ ಸರ್ಕಾರವನ್ನು ಟೀಕಿಸುವ ಅಂಶಗಳಿವೆ ಎಂದು ಆ ಭಾಷಣವನ್ನು ಓದದೆ ನಿರಾಕರಿಸಿ ತಮ್ಮದೇ ಆದ ಕೆಲ ವಾಕ್ಯಗಳನ್ನು ಜಂಟಿ ಅಧಿವೇಶನದಲ್ಲಿ ಓದಿ ಸದನದಿಂದ ಹೊರ ನಡೆದಿದ್ದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಈಗ ಬರುವ ಜನವರಿ 26 ರಂದು ನಡೆಯಲಿರುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ಕೇಂದ್ರವನ್ನು ಟೀಕಿಸುವ ಅಂಶಗಳಿದ್ದರೆ ಆ ಭಾಷಣವನ್ನು ಓದುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ಸರ್ಕಾರಕ್ಕೆ ರವಾನಿಸಿದ್ದಾರೆ.ಗಣರಾಜ್ಯೋತ್ಸವದ ಸಮಾರಂಭದಲ್ಲಿ ರಾಜ್ಯಪಾಲರು ಓದುವ ಭಾಷಣವನ್ನು ಸಾಮಾನ್ಯವಾಗಿ ರಾಜ್ಯ ಸರ್ಕಾರ ಸಿದ್ಧಪಡಿಸುತ್ತದೆ. ಈ ಭಾಷಣದಲ್ಲಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರ ಅನ್ಯಾಯಗಳನ್ನು ಪ್ರಸ್ತಾಪಿಸಿ, ಕೇಂದ್ರ ರಾಜ್ಯದ ಬಗ್ಗೆ ಮಲತಾಯಿ ಧೋರಣೆ ತಾಳಿದೆ ಎಂಬ ಅಂಶಗಳನ್ನು ಸೇರ್ಪಡೆ ಮಾಡಿದೆ ಎಂದು ತಿಳಿದು ಬಂದಿದ್ದು, ಈ ರೀತಿ ಕೇಂದ್ರವನ್ನು ಗುರಿಯಾಗಿಸಿ ಟೀಕೆ ಮಾಡುವ ಯಾವುದೇ ಅಂಶಗಳಿದ್ದರೂ ಆ ಭಾಷಣವನ್ನು ನಾನು ಓದಲ್ಲ. ನನ್ನದೇ ಆದ ಭಾಷಣವನ್ನು ಸಿದ್ಧಪಡಿಸಿ ಓದಬೇಕಾಗುತ್ತದೆ ಎಂಬ ಎಚ್ಚರಿಕೆಯ ಸಂದೇಶವನ್ನು ರಾಜ್ಯಪಾಲರು ಸರ್ಕಾರಕ್ಕೆ ನೀಡಿದ್ದಾರೆ. ಪ್ರತಿ ವರ್ಷ ಜನವರಿ 26ರ ಗಣರಾಜ್ಯೋತ್ಸವದಂದು ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣಿಕ್ಯ ಷಾ ಮೈದಾನದಲ್ಲಿ ನಡೆಯುಲಿರುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ರಾಜ್ಯಪಾಲರು ಸರ್ಕಾರ ಸಿದ್ಧಪಡಿಸಿಕೊಟ್ಟ ಭಾಷಣವನ್ನು ಓದುವುದು ಇದುವರೆಗಿನ ಸಂಪ್ರದಾಯವಾಗಿದೆ. ಆದರೆ ಜನವರಿ 22 ರಂದು ನಡೆದ ಕರ್ನಾಟಕ

ವಿಧಾನ ಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರು ಸರ್ಕಾರ ಸಿದ್ಧಪಡಿಸಿದ ಭಾಷಣದಲ್ಲಿ ಕೇಂದ್ರ ಸರ್ಕಾರವನ್ನು ಟೀಕಿಸುವ ಅಂಶಗಳಿವೆ ಎಂದು ಭಾಷಣವನ್ನು ಪೂರ್ಣವಾಗಿ ಓದದೆ ಕೇವಲ 2 ಸಾಲಿನ ಭಾಷಣವನ್ನು ಓದಿದ್ದರು. ಇದು ಸರ್ಕಾರ ಮತ್ತು ರಾಜ್ಯಪಾಲರ ನಡುವೆ ಸಂಘರ್ಷಕ್ಕೆ ಎಡೆ ಮಾಡಿಕೊಟ್ಟಿತ್ತು.

ರಾಜ್ಯಪಾಲರ ನಡೆ ವಿರುದ್ಧ ಆಡಳಿತ ಪಕ್ಷ ಕಾಂಗ್ರೆಸ್ ಆಕ್ರೋಶ ವ್ಯಕ್ತಪಡಿಸಿ, ರಾಜ್ಯಪಾಲರು ಸಂವಿಧಾನ ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿತ್ತು. ಇದರ ಬೆನ್ನಲ್ಲೆ ಗಣರಾಜ್ಯೋತ್ಸವದಲ್ಲಿ ರಾಜ್ಯಪಾಲರು ಮಾಡುವ ಭಾಷಣದ ಸಂಬಂಧವೂ ಈಗ ಸರ್ಕಾರ ಮತ್ತು ರಾಜ್ಯಪಾಲರ ನಡುವೆ ಜಟಾಪಟಿ ಆರಂಭವಾಗಿದೆ.

ಗಣರಾಜ್ಯೋತ್ಸವದಂದು ರಾಜ್ಯಪಾಲರು ಮಾಡುವ ಭಾಷಣದಲ್ಲಿ ವಿಬಿ ಜಿ ರಾಮ್ ಜಿ ಕಾಯ್ದೆಯನ್ನು ಟೀಕಿಸುವ ಅಂಶವಿಲ್ಲವಾದರೂ ಕೇಂದ್ರದಿಂದ ರಾಜ್ಯಕ್ಕೆ ಆಗಿರುವ ಅನ್ಯಾಯ, ತಾರತಮ್ಯದ ಅಂಶಗಳಿದ್ದು, ಕೇಂದ್ರ ಮಲತಾಯಿ ಧೋರಣೆಯ ಅಂಶಗಳನ್ನು ಭಾಷಣದಲ್ಲಿ ರಾಜ್ಯ ಸರ್ಕಾರ ಸೇರ್ಪಡೆ ಮಾಡಿದೆ ಎಂದು ತಿಳಿದು ಬಂದಿದೆ. ಹಾಗಾಗಿ ರಾಜ್ಯಪಾಲರು ಈ ಭಾಷಣವನ್ನು ತಾವು ಓದಲ್ಲ, ಈ ಅಂಶಗಳನ್ನು ತೆಗೆದು ಹಾಕದಿದ್ದರೆ ತಮ್ಮದೇ ಆದ ಭಾಷಣವನ್ನು ಸಿದ್ಧಪಡಿಸಿ ಓದಬೇಕಾಗುತ್ತದೆ ಎಂದು ಸರ್ಕಾರಕ್ಕೆ ಸಂದೇಶ ಕಳುಹಿಸಿದ್ದಾರೆ.

ಹೀಗಾಗಿ ಮತ್ತೆ ರಾಜಭವನ ಮತ್ತು ರಾಜ್ಯ ಸರ್ಕಾರದ ನಡುವೆ ಮತ್ತೊಂದು ಸುತ್ತಿನ ಸಂಘರ್ಷಕ್ಕೆ ಗಣರಾಜ್ಯೋತ್ಸವದ ಭಾಷಣದ ಕರಡು ಎಡೆ ಮಾಡಿಕೊಟ್ಟಿದೆ. ಗಣರಾಜ್ಯೋತ್ಸವದಂದು ರಾಜ್ಯಪಾಲರು ಓದುವ ಭಾಷಣವನ್ನು ಸರ್ಕಾರ ಸಿದ್ಧಪಡಿಸಿದೆ. ರಾಜ್ಯಪಾಲರು ರಾಜ್ಯದ ಸಾಂವಿಧಾನಿಕ ಮುಖ್ಯಸ್ಥರಾಗಿರುವುದರಿಂದ ಸರ್ಕಾರದ ಭಾಷಣವನ್ನು ಓದುತ್ತಾರೆ. ಈ ಭಾಷಣದ ಕರಡನ್ನು ರಾಜ್ಯಪಾಲರ ಕಚೇರಿಗೆ ರಾಜ್ಯ ಸರ್ಕಾರ ಈಗಾಗಲೇ ಕಳುಹಿಸಿಕೊಟ್ಟಿದ್ದು, ಭಾಷಣದಲ್ಲಿರುವ ಕೆಲ ಅಂಶಗಳ ಬಗ್ಗೆ ರಾಜ್ಯಪಾಲರು ಆಕ್ಷೇಪ ವ್ಯಕ್ತಪಡಿಸಿ, ಕೇಂದ್ರವನ್ನು ಟೀಕಿಸುವ ಅಂಶಗಳನ್ನು ಕೈ ಬಿಡಿ ಎಂದು ಲೋಕಭವನದಿಂದ ರಾಜ್ಯ ಸರ್ಕಾರಕ್ಕೆ ಸೂಚನೆ ಬಂದಿದೆ. ಹಾಗಾಗಿ ರಾಜ್ಯ ಸರ್ಕಾರ ರಾಜ್ಯಪಾಲರ ಮಾತಿನಂತೆ ಭಾಷಣವನ್ನು ಬದಲಿಸುತ್ತದೆಯೇ ಎಂಬುದು ಕುತೂಹಲ ಮೂಡಿಸಿದ್ದು, ಒಂದು ವೇಳೆ ಗಣರಾಜ್ಯೋತ್ಸವದ ಭಾಷಣವನ್ನು ಸರ್ಕಾರ ಬದಲಿಸದಿರಲು ನಿರ್ಧರಿಸಿದರೆ ರಾಜ್ಯಪಾಲರು ತಮ್ಮದೇ ಆದ ಭಾಷಣ ಓದುವರೇ ಎಂಬುದು ಈಗ ಕುತೂಹಲ ಮೂಡಿಸಿದೆ.

ವಿಧಾನ ಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರು ಸರ್ಕಾರ ಸಿದ್ಧಪಡಿಸಿದ ಭಾಷಣ ಓದದಿದ್ದರಿಂದ ಕಾಂಗ್ರೆಸ್ ಸದಸ್ಯರು ಸದನದಲ್ಲೇ ಆಕ್ರೋಶ ಹೊರ ಹಾಕಿದ್ದರು. ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ರವಿ, ವಿಧಾನಸಭಾ ಸದಸ್ಯರಾದ ವಾಗಡಿಯು ಬಾಲಕೃಷ್ಣ ಇವರುಗಳು ರಾಜ್ಯಪಾಲರನ್ನು ಅಡ್ಡ ಹಾಕಿ ಭಾಷಣ ಓದುವಂತೆ ಆಗ್ರಹಿಸಿದ್ದರು. ಈ ಸಂದರ್ಭದಲ್ಲಿ ಜಟಾಪಟಿ ನಡೆದು ಮಾರ್ಷಲ್‌ಗಳು ಕಾಂಗ್ರೆಸ್ ಸದಸ್ಯರುಗಳನ್ನು ಪಕ್ಕಕ್ಕೆ ತಳ್ಳಿ, ರಾಜ್ಯಪಾಲರು ಸದನದಿಂದ ನಿರ್ಗಮಿಸಲು ಅನುವು ಮಾಡಿಕೊಟ್ಟಿದ್ದರು.

ಈ ಜಟಾಪಟಿಯಲ್ಲಿ ಬಿ.ಕೆ. ಹರಿಪ್ರಸಾದ್ ರವರ ಜುಬ್ಬ ಹರಿದಿತ್ತು. ಈ ವಿಚಾರ ಕಾಂಗ್ರೆಸ್ ಹಾಗೂ ವಿಪಕ್ಷಗಳ ನಡುವೆ ಆರೋಪ-ಪ್ರತ್ಯಾರೋಪ, ವಾಕ್ಸಮರಕ್ಕೂ ಕಾರಣವಾಗಿ ಸದನದಲ್ಲಿ ಇದು ದೊಡ್ಡ ಮಟ್ಟದಲ್ಲಿ ಸದ್ದು ಮಾಡಿತ್ತು.

## ಕೈಗಾರಿಕೆಗಳಿಗೆ ರಫ್ತು ಉತ್ತೇಜನ ಕಾರ್ಯಾಗಾರ ಅತ್ಯವಶ್ಯ



**ತುಮಕೂರು, ಜ. 24–** ಬೆಂಗಳೂರು ನಂತರ ಕಲ್ಪತರು ನಗರಿ ತುಮಕೂರು ಬೃಹತ್ ಕೈಗಾರಿಕಾ ನಗರವಾಗಿ ಹೊರಹೊಮ್ಮಿದ್ದು ಅಂತಾರಾಷ್ಟ್ರೀಯ ಬಹು ಕಂಪನಿಗಳು ಇಲ್ಲಿ ನೆಲೆಸುವಂತಹ ಅವಕಾಶಗಳು ಸೌಲಭ್ಯಗಳಿದ್ದು ಸ್ಥಳೀಯವಾಗಿ ಉದ್ಯೋಗ ನೀಡುವಂತಹ ಸಣ್ಣ ಕೈಗಾರಿಕೆಗಳು ತಮ್ಮ ಉತ್ಪನ್ನಗಳನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾರುಕಟ್ಟೆಗೊಳಿಸಲು ಕೇಂದ್ರ ಸರ್ಕಾರದ ಯೋಜನೆಯಡಿ ಕೈಗಾರಿಕೆಗಳಿಗೆ ರಫ್ತು ಉತ್ತೇಜನ ಕಾರ್ಯಾಗಾರ ಬಹು ಅವಶ್ಯವಾಗಿದೆ ಎಂದು ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರದ ಜಂಟಿ ನಿರ್ದೇಶಕ ಸಿ.ಕೆ.ನಾಗರಾಜು ಹೇಳಿದರು.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರ, ಕರ್ನಾಟಕ ಸ್ಟೇಟ್ಸ್ ಮಾರ್ಕೆಟಿಂಗ್ ಕಮ್ಯೂನಿಕೇಶನ್ ಅಂಡ್ ಅಡ್ವಟೈಸಿಂಗ್ ಲಿಮಿಟೆಡ್ ಮತ್ತು ಅವೇಕ್ ಸಂಸ್ಥೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಾರುಕಟ್ಟೆಯ ರಫ್ತು ಉತ್ತೇಜನ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೈಗಾರಿಕೆಗಳು ಬೆಳೆಯಲು ಉತ್ತಮವಾದ ಮಾರುಕಟ್ಟೆ ವ್ಯವಸ್ಥೆಯ ಅತಿಮುಖ್ಯವಾಗಿದ್ದು ಸ್ಪರ್ಧಾತ್ಮಕ ಜಗತ್ತಿನಲ್ಲಿ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವುದು ಕಬ್ಬಿಣದ ಕಡಲೆಯಾಗಿದೆ. ಆದುದರಿಂದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಯಾರ್‌ಂಪ್ ಮಾರುಕಟ್ಟೆಯ ವ್ಯವಸ್ಥೆ ರಫ್ತು ವ್ಯವಹಾರವನ್ನು ಸಣ್ಣ ಕೈಗಾರಿಕೆಗಳು ಬಳಸಿಕೊಳ್ಳುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಸ್ಥಾಪಿಸಲಾಗಿರುವ ಡಿಸ್ಟ್ರಿಕ್ಟ್ ಎಕ್ಸ್ಪೋರ್ಟ್ ಫೋರಂ ಸಹಕಾರಿಯಾಗಿದ್ದು ಇದನ್ನು ಬಳಸಿಕೊಂಡು ಉದ್ಯಮಿಗಳು ಅಭಿವೃದ್ಧಿಗೊಳ್ಳಬಹುದು ಎಂದು ತಿಳಿಸಿದರು.

ಜಿಲ್ಲಾ ಸಣ್ಣ ಕೈಗಾರಿಕೆಗಳ ಸಂಘಟನೆ ಅಧ್ಯಕ್ಷ ಹಾಗೂ ಎಫ್‌ಕೆಸಿಸಿಐ ಮೆಂಬರ್ ಸುಜ್ಞಾನ್ ಹಿರೇಮಠ ಮಾತನಾಡಿ, ವರ್ಲ್ಡ್ ಮ್ಯಾಪ್‌ನಲ್ಲಿ ತುಮಕೂರಿನ ಕೈಗಾರಿಕೆ ಹಬ್ ಕಾಣುತ್ತಿದೆ. ಕೈಗಾರಿಕೆಗಳ ಬೃಹತ್ ನಗರವಾಗಿ ಬೆಳೆದಿರುವ ಇಲ್ಲಿ ಎಚ್‌ಎಎಲ್, ಇಸ್ರೋ ಸೇರಿದಂತೆ ಮಲ್ಟಿ ನ್ಯಾಷನಲ್ ಕೈಗಾರಿಕೆಗಳು ತಲೆ ಎತ್ತಿರುವುದು ಶ್ಲಾಘನೀಯವಾಗಿದ್ದು ಕೈಗಾರಿಕೆಗಳು ಕೇವಲ ಸ್ಥಾಪನೆಯಾದರೆ ಸಾಲದು ಕೌಶಲ್ಯ ಭರಿತ ಉತ್ಪಾದನೆ ಮತ್ತು ಮಾರುಕಟ್ಟೆ ವ್ಯವಸ್ಥೆಯನ್ನು ಬಳಸಿಕೊಂಡಾಗ ಮಾತ್ರ ಕೈಗಾರಿಕೆಗಳು ಉಳಿಯುತ್ತವೆ. ಇಂದಿನ ವಿದ್ಯಾರ್ಥಿಗಳು ಮತ್ತು ಯುವಕರು ಕೈಗಾರಿಕೋದ್ಯಮಿಗಳಾಗಿ ಬದಲಾಗುವ ಬದಲು ಉದ್ಯೋಗಿಗಳಾಗಿ ಬದಲಾಗುತ್ತಿದ್ದಾರೆ. ಕೈಗಾರಿಕಾ ವಲಯದಲ್ಲಿ ಸಾಕಷ್ಟು ವಿಫಲವಾದ ಅವಕಾಶಗಳಿದ್ದು, ನಮ್ಮ ದೇಶದ ಯುವಕರು ವಿದೇಶಗಳಿಗೆ ತೆರಳಿ ಅಧ್ಯಯನ ಮಾಡುವ ಅವಕಾಶಗಳು ಕಡಿಮೆಯಾಗಿದೆ.

ಮುಂದುವರೆದ ತಂತ್ರಜ್ಞಾನದ ಎಲ್ಲ ಆಯಾಮಗಳನ್ನು ಬಳಸಿಕೊಂಡು ಯುವಕರು ಕೈಗಾರಿಕೆಗಳನ್ನು ಕಟ್ಟಬೇಕಾಗಿದೆ. ಈ ನಿಟ್ಟಿನಲ್ಲಿ ಇಲ್ಲಿ ನಡೆಯುವ ಕಾರ್ಯಗಾರಗಳು ಸಣ್ಣ ಕೈಗಾರಿಕೆಗಳಿಗೆ ಅನುಕೂಲವಾಗಲಿದ್ದು ಅಂತಾರಾಷ್ಟ್ರೀಯ ಮಟ್ಟದಲ್ಲಿ ವ್ಯವಹರಿಸಲು ಉತ್ತಮವಾಗಿದೆ ಎಂದು ತಿಳಿಸಿದರು.

ವಸಂತ ನರಸಾಪುರ ಕೈಗಾರಿಕಾ ಸಂಘದ ಅಧ್ಯಕ್ಷ ಡಾ. ಹರೀಶ್ ಮಾತನಾಡಿ, ತುಮಕೂರು ಜಿಲ್ಲೆಯಲ್ಲಿ ಕೈಗಾರಿಕಾ ಸ್ಥಾಪನೆಗೆ ಅನೇಕ ರೀತಿಯ ಸೌಕರ್ಯ ಸಹಕಾರ ಸೌಲಭ್ಯಗಳಿವೆ. ಪ್ರಸ್ತುತ ಗ್ರಾಹಕರ ಬೇಡಿಕೆಗೆ ಅನುಗುಣವಾದ ಉತ್ಪಾದನಾ ಇಂಡಸ್ಟ್ರಿಗಳು ಬರಬೇಕಾಗಿದೆ. ಇದಕ್ಕೆ ಪೂರಕವಾಗಿ ಜಿಲ್ಲಾ ಕೈಗಾರಿಕಾ ತರಬೇತಿ ಸಂಸ್ಥೆಯು ಮಾರ್ಗದರ್ಶನ ಮಾಡುತ್ತಿದೆ. ಬೆಂಗಳೂರಿನಲ್ಲಿ ಕೈಗಾರಿಕೆ ಸ್ಥಾಪನೆ ಮಾಡಲು ಸಾಧ್ಯವಾಗುತ್ತಿಲ್ಲ. ಅಲ್ಲಿಯ ಭೂಮಿಯ ಬೆಲೆ 5 ಕೋಟಿ ರೂ.ಗಳಾಗಿದ್ದು ಕೈಗಾರಿಕೆ ಸ್ಥಾಪನೆ ಮಾಡಲು ತುಮಕೂರು ಯೋಗ್ಯವಾದ ಸ್ಥಳವಾಗಿದೆ. ಅನೇಕ ಸೌಲಭ್ಯಗಳನ್ನು ಒಳಗೊಂಡಿದೆ ಯುವ ಸಮೂಹ ಕೈಗಾರಿಕೆ ಸ್ಥಾಪಿಸಲು ಮುಂದಾಗಬೇಕು ಎಂದರು.

ಎಸ್ಸಿ,ಎಸ್ಟಿ ಜಿಲ್ಲಾ ಕೈಗಾರಿಕೋದ್ಯಮಿಗಳ ಸಂಘದ ಅಧ್ಯಕ್ಷ ಸೇವಂತ್ ವಾಸುದೇವ್ ಮಾತನಾಡಿ, ಕೈಗಾರಿಕಾ ನಗರ ತುಮಕೂರು ಮೊದಲು ಆಹಾರ ಸಂಸ್ಕರಣೆ ಮತ್ತು ಸಿದ್ಧ ಉಡುಪು ಕಂಪನಿಗಳನ್ನು ಒಳಗೊಂಡಿತ್ತು ಇಂದು ಅಂತಾರಾಷ್ಟ್ರೀಯ ಮಟ್ಟದ ಬಹು ಕಂಪನಿಗಳು ಸ್ಥಾಪನೆಯಾಗಿ ಸಣ್ಣಪುಟ್ಟ ಕಂಪನಿಗಳು ಮುಚ್ಚುವ ಹಂತದಲ್ಲಿವೆ ಕಾರಣ ಅವರಿಗೆ ಮಾರುಕಟ್ಟೆ ಮತ್ತು ಬಂಡವಾಳದ ಕೊರತೆ ಎದುರಾಗಿದ್ದು ಇಂತಹ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಯಾರ್‌ಂಪ್ ಯೋಜನೆಯ ರಫ್ತು ಉತ್ತೇಜನ ಕಾರ್ಯಗಾರವು ಬಹಳ ಅನುಕೂಲವಾಗಿದ್ದು ಯುವಕರು ಇದನ್ನು ಬಳಸಿಕೊಂಡು ನೂತನ ಇಂಡಸ್ಟ್ರಿಗಳಾಗಿ ಹೊರಹೊಮ್ಮಬೇಕು ಎಂದು ಕಿವಿ ಮಾತು ಹೇಳಿದರು.

ಅವೈಕ್ ಸಂಸ್ಥೆಯ ಅಧ್ಯಕ್ಷೆ ಭುವನೇಶ್ವರಿ ಮಾತನಾಡಿ, ಕೈಗಾರಿಕಾ ಕ್ಷೇತ್ರದಲ್ಲಿ ಮಹಿಳೆಯನ್ನು ತೊಡಗಿಸುವ ಸಲುವಾಗಿ ಮಹಿಳಾ ಇಂಡಸ್ಟ್ರಿಗಳನ್ನು ಹುಟ್ಟಿ ಹಾಕಲು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅನೇಕ ಯೋಜನೆಗಳು ವರದಾನವಾಗಿವೆ. ಇಂದಿನ ಯುವ ಮಹಿಳೆಯರು ಸಬಲೀಕರಣದ ಜತೆಗೆ ಉದ್ಯೋಗ ನೀಡುವ ದಾತರಾಗಬೇಕು ಎಂದು ತಿಳಿಸಿದರು.

ರಫ್ತು ಉತ್ತೇಜನ ಕುರಿತಂತೆ ಸಂಪನ್ಮೂಲ ವ್ಯಕ್ತಿಗಳಾದ ಕೋದಂಡರಾಮ ಅವರು ಸಣ್ಣ ಕೈಗಾರಿಕೆಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಮಾರುಕಟ್ಟೆಯನ್ನು ಗುರುತಿಸಿಕೊಳ್ಳುವ ವಿವಿಧ ವಿಧಾನಗಳನ್ನು ಕಾರ್ಯಗಾರದಲ್ಲಿ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ವಿವಿಧ ಕೈಗಾರಿಕೋದ್ಯಮಿಗಳು, ಹೊಸ ಎಂಟರ್ ಪ್ರೈಸಸ್‌ಗಳು ಸದಾಶಿವ, ಮನು, ರಘು, ಪ್ರಸಾದ್ ಮತ್ತಿತರರು ಉಪಸ್ಥಿತರಿದ್ದರು.

## ರಾಯಚೂರು ಜಿಲ್ಲಾ ಉತ್ಸವ: ಫೆ.05ರಿಂದ 07ರವರೆಗೆ ವಿವಿಧ ಕಾರ್ಯಕ್ರಮಗಳ ಮಹಾಸಂಭ್ರಮ

**ರಾಯಚೂರು,ಜ.24–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಫೆಬ್ರವರಿ 05, 06 ಹಾಗೂ 07ರವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಎಡೆದೊರೆ ನಾಡಿನ ಕಲೆ, ಸಾಹಿತ್ಯ, ಸಾಂಸ್ಕೃತಿಕ, ವಿಚಾರ ಸಮಕಿರಣ, ಯುವಜನೋತ್ಸವದ ಮಹಾಸಂಭ್ರಮ ಕಾರ್ಯಕ್ರವನ್ನು ಹಮ್ಮಿಕೊಳ್ಳಲಾಗಿದೆ.


ಕಾರ್ಯಕ್ರಮದಲ್ಲಿ ಕೃಷಿ ಮೇಳೆ-2026, ಫಲಪುಷ್ಪ ಪ್ರದರ್ಶನ & ಮತ್ಸ ಮೇಳ, ಪಂಚ ಗ್ಯಾರಂಟಿ ಮೇಳ, ಆಹಾರ ಮೇಳ, ಉದ್ಯೋಗ ಮೇಳ, ಕರಕುಶಲ, ಕೈಗಾರಿಕೆ, ಪುಸ್ತಕ ಪ್ರದರ್ಶನ ಹಾಗೂ ಚಿತ್ರ ಸಂತೆ, ಕ್ರೀಡಾಕೂಟ, ಕವಿ ಮಹಿಳಾ ಮತ್ತು ಮಾಧ್ಯಮ ಗೋಷ್ಠಿ ನಡೆಯಲಿದೆ.

ಫಬ್ರವರಿ 05ರಂದು ಖ್ಯಾತ ಗಾಯಕರಾದ ಸಂಜಿತ್ ಹೆಗಡೆ, ಫೆಬ್ರವರಿ 06ರಂದು ರಾಜೇಶ್ ಕೃಷ್ಣನ್ ಹಾಗೂ ಫೆಬ್ರವರಿ 07ರಂದು ವಿಜಯ ಪ್ರಕಾಶ್ ಅವರಿಂದ ಸಂಗೀತ ಕಾರ್ಯಕ್ರಮಗಳು ಜರುಗಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ರಾಯಚೂರು ಜಿಲ್ಲಾ ಉತ್ಸವ ಸಮಿತಿಯು ಪ್ರಕಟಣೆಯಲ್ಲಿ ತಿಳಿಸಿದೆ.

## 16ನೇ ರಾಷ್ಟ್ರೀಯ ಮತದಾನ ದಿನಾಚರಣೆ: ಪ್ರಮಾಣ ವಚನ

**ಕಲಬುರಗಿ,ಜ.24–**ನಗರ ಹೊರವಲಯದ ಕೇಂದ್ರ ಕಾರಾಗೃಹದಲ್ಲಿ ಶುಕ್ರವಾರ ರಾಷ್ಟ್ರೀಯ ಮತದಾನ ದಿನಾಚರಣೆ ಪ್ರಯುಕ್ತ ಸಂಸ್ಥೆಯ ಅಧೀಕ್ಷಕರಾದ ರಾಕೇಶ್ ಕಾಂಬಳೆರವರು ಕಾರಾಗೃಹದ ಎಲ್ಲಾ ಅಧಿಕಾರಿ/ ಸಿಬ್ಬಂದಿಗಳೊಂದಿಗೆ ಸೇರಿ ರಾಷ್ಟ್ರೀಯ ಮತದಾರರ ಪ್ರತಿಜ್ಞೆ ಪ್ರಮಾಣ ವಚನವನ್ನು ಸ್ವೀಕರಿಸಿದರು.

ನಂತರ ಮಾತನಾಡಿದ ಅವರು ಪ್ರತಿಯೊಬ್ಬರು ಮುಕ್ತ ಮತ್ತು ನ್ಯಾಯ ಸಮ್ಮತವಾದ ಮತದಾನಕ್ಕೆ ಒತ್ತು ಕೊಟ್ಟು ಯಾವುದೇ ಅಮಿಷನಕ್ಕೆ ಒಳಗಾಗದೇ ಜಾತಿ, ಧರ್ಮ, ಜನಾಂಗ, ಭಾಷೆ ಇವುಗಳನ್ನು ಮೆಟ್ಟಿ ನಿಂತು ಯಾವುದೇ ರೀತಿಯಲ್ಲಿ ಪ್ರಭಾವಿತರಾಗದೇ ಮತ ಚಲಾಯಿಸಬೇಕೆಂದು ಕರೆ ನೀಡಿದರು.



ಈ ಸಂದರ್ಭದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕರಾದ ಚನ್ನಪ್ಪ, ಸಂಸ್ಥೆಯ ಸಹಾಯಕ ಆಡಳಿತಾಧಿಕಾರಿಗಳಾದ ಭೀಮಾಶಂಕರ್ ಡಾಂಗೆ, ಹಾಗೂ ಜೈಲರ್‌ಗಳಾದ ಸಾಗರ್ ಪಾಟೀಲ್, ಶ್ರೀಮಂತಗೌಡ ಪಾಟೀಲ್, ಪುಂಡಲಿಕ, ಟಿ.ಕೆ, ಶಾಮ ಬಿದರಿ ಹಾಗೂ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಹಾಗೂ ಸಂಸ್ಥೆಯ ಎಲ್ಲಾ ಅಧಿಕಾರಿ/ ಸಿಬ್ಬಂದಿಗಳು ಭಾಗವಹಿಸಿದರು.

# ಜನವರಿ 26ರಂದು ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**ರಾಯಚೂರು,ಜ.24–** ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು 2026ರ ಜನವರಿ 26ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 9ಗಂಟೆಗೆ ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ ವತಿಯಿಂದ ಏರ್ಪಡಿಸಲಾದ ಗಣರಾಜ್ಯೋತ್ಸವ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 10.30ಕ್ಕೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಾಯಚೂರು ಉತ್ಸವ ಕುರಿತು ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 11ಗಂಟೆಗೆ ರಾಯಚೂರಿನಿಂದ ರಸ್ತೆ ಮೂಲಕ ದೇವದುರ್ಗ ತಾಲ್ಲೂಕಿನ ಗಬ್ಬೂರಿಗೆ ಪ್ರಯಾಣ ಬೆಳಸಿ, ಶ್ರೀ ಬೂದಿಬಸವೇಶ್ವರ ಮಹಾಸಂಸ್ಥಾನಮಠ ಗಬ್ಬೂರು ಇವರ ವತಿಯಿಂದ ಏರ್ಪಡಿಸಿರುವ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ಗಬೂರಿನಿಂದ ರಸ್ತೆ ಮೂಲಕ ಹೈದ್ರಾಬಾದಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಕ್ಷಣಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು,ಜ.24–** ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಾಯಚೂರು ಕಚೇರಿಯಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಅನಾಥ, ಪರಿತ್ಯಕ್ತ, ಒಪ್ಪಿಸಲ್ಪಟ್ಟ, ಪೋಷಕರ ಸಂಪರ್ಕದಲ್ಲಿಲ್ಲದ ಮಕ್ಕಳನ್ನು ಗುರುತಿಸಿ ದತ್ತು ಪ್ರಕ್ರಿಯೇಗೆ ಒಳಪಡಿಸುವ ಜವಾಬ್ದಾರಿ ಒಳಗೊಂಡ ರಕ್ಷಣಾಧಿಕಾರಿ (ಅಸಾಂಸ್ಥಿಕ) ಸೃಜಿಸಿದ ಹುದ್ದೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮಾನ್ಯತೆಯುಳ್ಳ ವಿಶ್ವವಿದ್ಯಾಲಯದಿಂದ ಸಮಾಜ ಕಾರ್ಯ/ಸಮಾಜ ವಿಜ್ಞಾನ/ಮಕ್ಕಳ ಅಭಿವೃದ್ಧಿ/ಮಾನವ ಹಕ್ಕುಗಳ ಸಾರ್ವಜನಿಕ ಆಡಳಿತ/ಮನೋವಿಜ್ಞಾನ/ಮನಃಶಾಸ್ತ್ರ/ ಕಾನೂನು/ಸಾರ್ವಜನಿಕ ಆರೋಗ್ಯ/ಸಮೂದಾಯ ಸಂಪನ್ಮೂಲ ನಿರ್ವಹಣೆ ಕುರಿತು ಸ್ನಾತಕೋತ್ತರ ಪದವಿ ಹೊಂದಿರಬೇಕು. ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕ್ಷೇತ್ರದಲ್ಲಿ ಸರ್ಕಾರಿ/ ಸರ್ಕಾರೇತರ ಸಂಸ್ಥೆಗಳಲ್ಲಿ ಕನಿಷ್ಠ 2 ವರ್ಷ ಸೇವೆ ಸಲ್ಲಿಸಿದ ಬಗ್ಗೆ ಕೆಲಸದ ಅನುಭವ ಹೊಂದಿರಬೇಕು. ಕಂಪ್ಯೂಟರ್ ಬಳಕೆಯಲ್ಲಿ ಪರಿಣಿತಿ ಹೊಂದಿರಬೇಕು. ಅರ್ಜಿ ಸಲ್ಲಿಸಬಯಸುವ ಅರ್ಹ ಅಭ್ಯರ್ಥಿಗಳು ದಿನಾಂಕ: 04–02–2026ರೊಳಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಾರ್ಯಲಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಾರ್ಯಲಯ ಮ.ನಂ. 1–9–138 ಮಾರೆಮ್ಮ ದೇವಸ್ಥಾನದ ಹತ್ತಿರ, ಆಜಾದ ನಗರ ರಾಯಚೂರು (ದೂ.ಸಂಖ್ಯೆ: 08532–226226) ಇಲ್ಲಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀ ಅಮರೇಶ ಹಾವಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಜನವರಿ 27ರಂದು ಸವಿತಾ ಮಹರ್ಷಿ ಜಯಂತಿ

**ರಾಯಚೂರು,ಜ.24–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 27ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ಹಿರಿಯ ಸಾಹಿತಿಗಳಾದ ವೀರಹನುಮಾನ ಅವರು ಸವಿತಾ ಮಹರ್ಷಿ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಧಾನಸೌಧದ ಬಾಗಿಲಲ್ಲಿ ವಿಷ ಸೇವಿಸಿ ಮಾಹಿತಿದಾರ ಆತ್ಮಹತ್ಯೆಗೆ ಯತ್ನ

**ಬೆಂಗಳೂರು.ಜ24:** ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶದ ನಾಗರಿಕರ ಸ್ಥಳಗಳ ಕುರಿತು ಮಾಹಿತಿ ನೀಡುತ್ತಿದ್ದ ಡಾ. ನಾಗೇಂದ್ರಪ್ಪ ಅವರ ಮೇಲೆ ಸ್ಥಳೀಯ ಪೊಲೀಸರು ನಿರಂತರ ಕಿರುಕುಳ ನೀಡುತ್ತಿದ್ದಾರೆಂದು ಆರೋಪಿಸಿ ವಿಧಾನಸೌಧದ ಬಾಗಿಲಲ್ಲಿ ವಿಷ ಸೇವಿಸಿ ಆತ್ಮಹತ್ಯೆ ಪ್ರಯತ್ನಿಸಿದ ಘಟನೆ ನಡೆದಿದೆ.



ವಿಷ ಸೇವಿಸಲೆತ್ನಿಸಿದ ಡಾ. ನಾಗೇಂದ್ರಪ್ಪ ಅವರಿಂದ ಪೊಲೀಸರೇ ವಿಷದ ಬಾಟಲಿ ಕಿತ್ತು ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದು ಚಿಕಿತ್ಸೆ ನೀಡಲಾಗುತ್ತಿದೆ.ಡಾ. ನಾಗೇಂದ್ರಪ್ಪ (48) ಸೂಲದೇವನಹಳ್ಳಿ ಪ್ರದೇಶದ ನಿವಾಸಿಯಾಗಿದ್ದು. ಅಕ್ರಮ ಬಾಂಗ್ಲಾ ವಲಸಿಗರ ಬಗ್ಗೆ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡುತ್ತಿದ್ದರು ಎಂದು ತಿಳಿದುಬಂದಿದೆ. ಇದರಿಂದ ಕೋಪಗೊಂಡ ಪೊಲೀಸರು ಪ್ರತಿದಿನ ಅವರ ಮನೆ ಬಳಿ ಬಂದು ಕಿರುಕುಳ ನೀಡುತ್ತಿದ್ದಾರೆಂದು ನಾಗೇಂದ್ರಪ್ಪ ಆರೋಪಿಸಿದ್ದಾರೆ. ಅವರ ಹೆಂಡತಿ ಮತ್ತು ಮಕ್ಕಳ ಮೇಲೂ ಕಿರುಕುಳ ನಡೆದಿದೆ ಎಂದು ಆರೋಪಿಸಿದ್ದಾರೆ.

"ಪ್ರತಿದಿನ 20 ಜನ ಪೊಲೀಸರು ಮತ್ತು 3 ಪೊಲೀಸ್ ವಾಹನಗಳು ನನ್ನ ಮನೆ ಬಳಿ ಬಂದು ನಿಲ್ಲುತ್ತಿದ್ದರು. ನನ್ನನ್ನು ಮತ್ತು ಕುಟುಂಬವನ್ನು ಹಿಂಸಿಸುತ್ತಿದ್ದರು. ಬಾಂಗ್ಲಾ ದೇಶದವರನ್ನು ಓಡಿಸಲು ನಾನು ಹೋರಾಟ ಮಾಡಿದ್ದೇ ತಪ್ಪಾ?" ಎಂದು ಹೇಳಿದ್ದ ಅವರು ಈ ಕಿರುಕುಳದಿಂದ ಮನನೊಂದು ವಿಧಾನಸೌಧದ ಬಳಿ ವಿಷಪಾನ ಮಾಡಿದರು ಎಂದು ತಿಳಿದುಬಂದಿದೆ.

ವಿಧಾನಸೌಧ ಬಳಿ ವಿಷ ಸೇವಿಸುತ್ತಿದ್ದ ನಾಗೇಂದ್ರಪ್ಪನನ್ನು ಪೊಲೀಸರು ಗಮನಿಸಿದರು. ತಕ್ಷಣ ವಿಷದ ಬಾಟಲಿಯನ್ನು ಕಿತ್ತುಕೊಂಡು, ಅವರನ್ನು ನಜ್ದಿಕ ಆಸ್ಪತ್ರೆಗೆ ತರಲಾಯಿತು. ಆಸ್ಪತ್ರೆಯ ವೈದ್ಯಕೀಯ ಸಿಬ್ಬಂದಿ ಅವರಿಗೆ ಚಿಕಿತ್ಸೆ ನೀಡುತ್ತಿದ್ದಾರೆ. ಅವರ ಸ್ಥಿತಿ ಗಂಭೀರವಾಗಿದೆ ಎನ್ನಲಾಗಿದೆ.

ಈ ಘಟನೆ ಕಾನೂನು ಮತ್ತು ನಾಗರಿಕ ಹಕ್ಕುಗಳ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎತ್ತಿದೆ. ಮಾನವ ಹಕ್ಕು ಸಂಘಟನೆಗಳು ಪೊಲೀಸರ ವರ್ತನೆಗೆ ನಿಖರ ತನಿಖೆ ಆಗಬೇಕು ಎಂದು ಒತ್ತಾಯಿಸಿವೆ. ಪೊಲೀಸ್ ಆಯೋಗ ನಾವು ಈ ಬಗ್ಗೆ ತನಿಖೆ ನಡೆಸುತ್ತಿದ್ದೇವೆ ಎಂದು ಹೇಳಿದ್ದಾರೆ.ರಾಜಧಾನಿಯಲ್ಲಿ ಅಕ್ರಮ ವಲಸಿಗರ ಪ್ರಶ್ನೆ ದೀರ್ಘಕಾಲದ ಸಮಸ್ಯೆ. ನಾಗೇಂದ್ರಪ್ಪನ ಘಟನೆ ಈ ಸಮಸ್ಯೆಯ ನ್ಯಾಯಯುತ ಪರಿಹಾರ ಮತ್ತು ಅಧಿಕಾರಿಗಳ ಜವಾಬ್ದಾರಿಯ ಕಡೆಗೆ ದೃಷ್ಟಿ ಸೆಳೆದಿದೆ.

# ಜನವರಿ 25ರಂದು ರಾಷ್ಟ್ರೀಯ ಮತದಾರರ ದಿನಾಚರಣೆ

**ರಾಯಚೂರು ಜ.24:**ಭಾರತ ಚುನಾವಣಾ ಆಯೋಗ ಮತ್ತು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ರಾಯಚೂರು ಇವರಿಂದ ಜನವರಿ 25ರ ಬೆಳಿಗ್ಗೆ 10.30ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾರುತಿ ಎಸ್. ಬಾಗಡೆ ಅವರು ಉದ್ಘಾಟನೆ ನೆರವೇರಿಸುವರು.

ಜಿಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿಸೀನಿಯರ್ ಸಿವಿಲ್ ಜಡ್ಜ್ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್. ಎ. ಸಾತ್ವಿಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ, ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ರಾಯಚೂರು ಉತ್ಸವ: ಫೆಬ್ರವರಿ 07ರಂದು ಪಂಚ ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶ

**ರಾಯಚೂರು ಜ.24:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಅಂಗವಾಗಿ ಫೆಬ್ರವರಿ 07ರಂದು ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಗೃಹಜ್ಯೋತಿ, ಯುವ ನಿಧಿ, ಅನ್ನಭಾಗ್ಯ, ಗೃಹ ಲಕ್ಷ್ಮಿ ಹಾಗೂ ಶಕ್ತಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ರಾಯಚೂರು ಉತ್ಸವ: ಫೆಬ್ರವರಿ 2, 3ರಂದು ಮಕ್ಕಳ ಹಬ್ಬ

**ರಾಯಚೂರು ಜ.24:**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಅಂಗವಾಗಿ ಫೆಬ್ರವರಿ 02 ಹಾಗೂ 03ರಂದು ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಮಕ್ಕಳ ಹಬ್ಬ–2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಕಾರ್ಯಕ್ರಮದಲ್ಲಿ ಮೆಗಾ ಮ್ಯಾಜಿಕ್ ಸ್ಟಾರ್ ಕುದ್ರೋಳಿ ಗಣೇಶ್ ಬಳಗದ ದಿಂದ ವಿಸ್ಮಯ ಜಾದೂ, ಮಜಾ ಟಾಕೀಸ್ ಖ್ಯಾತಿಯ ಅಶೋಕ್ ಪೊಳಲಿಯವರಿಂದ ವಿಭಿನ್ನ ಶೈಲಿಯ ಬೃಹತ್ ಗಾತ್ರದ ಕೋಳಿ ನೃತ್ಯ ಹಾಗೂ ರೋಬೋಟಿಕ್ ಪ್ರಾಣೀಗಳ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಯಚೂರು ಜಿಲ್ಲಾ ಉತ್ಸವ ಸಮಿತಿಯು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ

# ಇಲಾಖೆಯಿಂದ ಜಿಮ್ ಫಿಟ್ನೆಸ್ ತರಬೇತಿಗಾಗಿ ಅರ್ಜಿ ಆಹ್ವಾನ

**ರಾಯಚೂರು ಜ.24:**: 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಯುವಜನರನ್ನು ಸ್ವಾವಲಂಬಿಯಾಗಲು ಉತ್ತೇಜಿಸುವ ದೃಷ್ಟಿಯಿಂದ ಫೆಬ್ರವರಿ 01, 2026 ರಿಂದ ಮಾರ್ಚ 17, 2026ರವರೆಗೆ ಬೆಂಗಳೂರಿನ ಶ್ರೀ ಕಂಠಿರವ ಕ್ರೀಡಾಂಗಣದಲ್ಲಿ ಜಿಮ್ ಫಿಟ್ನೆಸ್ ತರಬೇತಿ ಶಿಬಿರವನ್ನು ಆಯೋಜಿಸಿದ್ದು, 18 ರಿಂದ 35 ವರ್ಷ ವಯೋಮಿತಿಯ ಆಸಕ್ತ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಯುವಕರು ಜನವರಿ 28 ರೊಳಗಾಗಿ ಅರ್ಜಿಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ತಡವಾಗಿ ಬಂದ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರೀಡಾ ಇಲಾಖೆಯಿಂದ ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನ

**ರಾಯಚೂರು ಜ.24:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಎನ್.ಐ.ಎಸ್ ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಶುಲ್ಕವನ್ನು ಮರುಪಾವತಿಗಾಗಿ ಅರ್ಜಿ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಎನ್.ಐ.ಎಸ್ (ಆರು ವಾರಗಳ ಪ್ರಮಾಣಪತ್ರ ಕೋರ್ಸ್, ಪಿ.ಜಿ ಡಿಪ್ಲೊಮಾ ಮತ್ತು ಎಂ.ಎಸ್ಸಿ ಕ್ರೀಡಾ ತರಬೇತಿ) ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಶುಲ್ಕವನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಸಹಾಯಕ ನಿರ್ದೇಶಕರ ಕಾರ್ಯಾಲಯ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ. ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ, ರಾಯಚೂರು ಜಿಲ್ಲಾ ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು, ದಿನಾಂಕ: 03–02–2026 ರೊಳಗಾಗಿ ಕಚೇರಿ ಅವಧಿಯಲ್ಲಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ, ರಾಯಚೂರು ಇಲ್ಲಿ ಕಚೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೀಪಾಲಂಕಾರ ವ್ಯವಸ್ಥೆ ಕೈಗೊಳ್ಳಲು ಸೂಚನೆ

**ರಾಯಚೂರು ಜ.24:** ಜಿಲ್ಲೆಯ ಜಿಲ್ಲಾಧಿಕಾರಿಗಳ ನಿರ್ದೇಶಿಸಿದಂತೆ ದಿನಾಂಕ:26.01.2026ರಂದು ಜರುಗುವ ಗಣರಾಜ್ಯೋತ್ಸವ ದಿನಾಚರಣೆ ಆಚರಿಸುವ ಅಂಗವಾಗಿ ರಾಯಚೂರು ನಗರದಲ್ಲಿ ಬರುವ ಎಲ್ಲಾ ವಾಣಿಜ್ಯ ಮಳಿಗೆಗಳು, ಹೋಟೆಲ್, ಸಂಘ, ಚೇಂಬರ ಆಫ್ ಕಾಮರ್ಸ, ರೋಟರಿ ಕ್ಲಬ್, ಲಯನ್ಸ್ ಕ್ಲಬ್ ಹಾಗೂ ಇತರೆ ಸಂಘ ಸಂಸ್ಥೆಗಳು ತಮ್ಮ ತಮ್ಮ ಕಟ್ಟಡಕ್ಕೆ ದೀಪಾಲಂಕಾರ ವ್ಯವಸ್ಥೆ ಕೈಗೊಳ್ಳಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದಿಂದ 1 ಲಕ್ಷ ಮೆಟ್ರಿಕ್ ಟನ್ ಕಡಲೆ ಖರೀದಿಗೆ ಕೇಂದ್ರ ನಿರ್ಧಾರ

**ನವದೆಹಲಿ,ಜ.24–**ಕೇಂದ್ರ ಸರ್ಕಾರವು ರಾಜ್ಯದಿಂದ ಬೆಂಬಲ ಬೆಲೆಯಲ್ಲಿ 1 ಲಕ್ಷ ಮೆಟ್ರಿಕ್ ಟನ್ ಕಡಲೆಯನ್ನು ಖರೀದಿಸುವುದಾಗಿ ಹೇಳಿದೆ. ಈ ಮೂಲಕ, ಈ ಕಷ್ಟದ ಸಮಯದಲ್ಲಿ ಕೇಂದ್ರವು ರಾಜ್ಯದ ಬೆಳೆಗಾರರ ನೆರವಿಗೆ ಬಂದಿದೆ.

ಕನಿಷ್ಠ ಬೆಂಬಲ ಬೆಲೆ ಯೋಜನೆ (ಎಂಎಸ್ಪಿ) ಅಡಿಯಲ್ಲಿ 5,875 ರೂ.ಗಳ ಬೆಲೆಯಲ್ಲಿ ಚಳಿಗಾಲದ ಋತುವಿಗಾಗಿ ಒಟ್ಟು 1,01,340 ಮೆಟ್ರಿಕ್ ಟನ್ ಕಡಲೆಯನ್ನು ಖರೀದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಬರೆದ ಪತ್ರದಲ್ಲಿ ಈ ವಿಷಯ ತಿಳಿಸಿದ್ದಾರೆ.

ಕರ್ನಾಟಕದ ಪ್ರಮುಖ ಬೇಳೆಕಾಳುಗಳಲ್ಲಿ ಒಂದಾದ ಕಡಲೆ ಇದರ ಉತ್ಪಾದನೆಯನ್ನು ಸುಮಾರು 9.24 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮಾಡಲಾಗುತ್ತದೆ. ಆದರೆ, ಪ್ರಸ್ತುತ ಬೆಲೆ ಮಾರುಕಟ್ಟೆ ಬೆಲೆಗಿಂತ ತೀರಾ ಕಡಿಮೆ ಇರುವುದರಿಂದ ಕಡಲೆ ಬೆಳೆದ ಬೆಳೆಗಾರರು ಗಂಭೀರ ತೊಂದರೆಗಳನ್ನು ಎದುರಿಸುತ್ತಿದ್ದಾರೆ.



ಆದ್ದರಿಂದ, ಬೆಂಬಲ ಬೆಲೆಯಲ್ಲಿ ಖರೀದಿಗೆ ಕ್ರಮ ಕೈಗೊಳ್ಳುವಂತೆ ಸಚಿವ ಪ್ರಲ್ಹಾದ್ ಜೋಶಿ ಅವರು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದಿದ್ದಾರೆ.

ಪ್ರಸ್ತುತ ಮಾರುಕಟ್ಟೆಯಲ್ಲಿ ಕಡಲೆ ಬೆಲೆ ಕ್ವಿಂಟಾಲ್‌ಗೆ 5,875 ರೂ.ಗಳಾಗಿದ್ದು, ಇದು 2026–27ರ ಆರ್‌ಎಂಎಸ್‌ಗೆ ಘೋಷಿಸಲಾದ ಎಂಎಸ್‌ಪಿಗಿಂತ ತೀರಾ ಕಡಿಮೆಯಾಗಿದೆ. ಅಲ್ಲದೆ, ಮುಂಬರುವ ದಿನಗಳಲ್ಲಿ ಬೇಳೆಯ ಬೆಲೆಗಳು ಮತ್ತಷ್ಟು ಕುಸಿಯುವ ಭೀತಿ ಇದೆ. ಆದ್ದರಿಂದ, ಕರ್ನಾಟಕದಲ್ಲಿ ಬೇಳೆಯ (ಕಡಲೆ) ಬೆಂಬಲ ಬೆಲೆ ಯೋಜನೆ (ಪಿಎಸ್‌ಎಸ್) ಆದ್ಯತೆಯ ಮೇಲೆ ಜಾರಿಗೆ ತರುವ ಅವಶ್ಯಕತೆಯಿದೆ ಎಂದು ಪ್ರಲ್ಹಾದ್ ಜೋಶಿ ಪತ್ರದಲ್ಲಿ ವಿವರಿಸಿದ್ದಾರೆ.

ಜೋಶಿ ಅವರ ಮನವಿಗೆ ಪ್ರತಿಕ್ರಿಯಿಸಿದ ಕೃಷಿ ಸಚಿವರು, ರಾಜ್ಯದ ರೈತರ ಅನುಕೂಲಕ್ಕಾಗಿ ಬೆಂಬಲ ಬೆಲೆಯಲ್ಲಿ 1 ಲಕ್ಷ ಮೆಟ್ರಿಕ್ ಟನ್‌ಗಿಂತಲೂ ಹೆಚ್ಚು ಬೇಳೆಯನ್ನು ಖರೀದಿಸಲು ರಾಜ್ಯ ಸರ್ಕಾರಕ್ಕೆ ಅನುಮೋದನೆ ನೀಡಿದ್ದಾರೆ. ಜಿಲ್ಲಾವಾರು ಖರೀದಿ ಕೇಂದ್ರಗಳನ್ನು ತಕ್ಷಣ ತೆರೆಯಲು ಮತ್ತು ರೈತರಿಂದ ಬೆಂಬಲ ಬೆಲೆಯಲ್ಲಿ ಕಡಲೆ ಖರೀದಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸಚಿವ ಜೋಶಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ರಾಜ್ಯದ ರೈತರ ನೆರವಿಗೆ ಬಂದ ಪ್ರಧಾನಿ ನರೇಂದ್ರ ಮೋದಿ ಮತ್ತು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಧನ್ಯವಾದ ಅರ್ಪಿಸಿದ್ದಾರೆ. ಅವರು ಖಾತರಿ ಬೆಲೆಯಲ್ಲಿ ಕಡಲೆ ಬೇಳೆಯನ್ನು ಖರೀದಿಸಲು ಅವಕಾಶ ನೀಡಿದ್ದಾರೆ.

# ವೃದ್ಧೆ ಸರ ಕದ್ದ ಕಳ್ಳಿಯರ ಸೆರೆ

**ಬೆಂಗಳೂರು,ಜ.24–**ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ವೃದ್ಧೆಯೊಬ್ಬಳನ್ನು ವಂಚಿಸಿ ಇಬ್ಬರು ಕಳ್ಳಿಯರು ಸರಗಳ್ಳತನ ಮಾಡಿದ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ವಿಜಯಪುರ ಪಟ್ಟಣದ ಅಶೋಕ್ ನಗರದಲ್ಲಿ ನಡೆದಿದೆ. ಶಿಡಲಘಟ್ಟದಿಂದ ದೇವನಹಳ್ಳಿಗೆ ಹೋಗುತ್ತಿದ್ದ ಬಸ್ಸಿನಲ್ಲಿ ವೃದ್ಧೆಯ ಹಿಂದೆ ಕುಳಿತು ಕಳ್ಳಿಯರು ಸರಗಳ್ಳತನ ಮಾಡಿದ್ದಾರೆ. ನಂತರ, ತಪ್ಪಿಸಿಕೊಳ್ಳಲು ಯತ್ನಿಸಿದ ಕಳ್ಳಿಯರು ಸಿಕ್ಕಿಬಿದ್ದಿದ್ದಾರೆ.

ವೆಂಕಟಮ್ಮ ಎಂಬ ವೃದ್ಧೆಯ ಕುತ್ತಿಗೆಯಿಂದ ಸರ ಕದ್ದಿದ್ದಾರೆ.ಕಳ್ಳಿಯರಾದ ಸುಧಾ ಮತ್ತು ಅನು ಬಸ್ ನಿಲ್ಲಿಸಿದಾಗ ಅಲ್ಲಿಂದ ಪರಾರಿಯಾಗಲು ಯತ್ನಿಸಿದ್ದಾರೆ ಅದೇ ಸಮಯದಲ್ಲಿ ವೃದ್ಧೆ ಸರ ಕಾಣೆಯಾಗಿದೆ ಎಂದು ಗೋಳಾಟ ನಡೆಸಿದ್ದಾರೆ.ಆ ಸಮಯದಲ್ಲಿ, ಸರಿಯಾಗಿ ಸ್ಥಳೀಯರು ಕಳ್ಳಿಯರನ್ನು ಬೆನ್ನಟ್ಟಿ ಅವರು ತಪ್ಪಿಸಿಕೊಳ್ಳದಂತೆ ಅವರನ್ನು ಹಿಡಿದು ಪೋಲಿಸರಿಗೆ ಒಪ್ಪಿಸಿದ್ದಾರೆ.

# ಯುವಕರಿಗೆ ಉದ್ಯೋಗ ಸೃಷ್ಟಿ: ಮೋದಿ

## 61 ಸಾವಿರ ಯುವ ಜನತೆಗೆ ನೇಮಕಾತಿ ಪತ್ರ ವಿತರಣೆ

**ನವದೆಹಲಿ,ಜ.24–** ಭಾರತ ವಿಶ್ವದ ಅತ್ಯಂತ ಕಿರಿಯರ ರಾಷ್ಟ್ರಗಳಲ್ಲಿ ಒಂದಾಗಿದೆ. ದೇಶ ಮತ್ತು ವಿದೇಶಗಳಲ್ಲಿ ಯುವಕರಿಗೆ ಹೊಸ ಉದ್ಯೋಗಾವಕಾಶ ಸೃಷ್ಟಿಸಲು ನಿರಂತರವಾಗಿ ಕೆಲಸ ಮಾಡಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಹೇಳಿದ್ದಾರೆ

ರೋಜ್‌ಗಾರ್ ಮೇಳ ಸಾರ್ವಜನಿಕ ನೇಮಕಾತಿಗಾಗಿ ನಿಯಮಿತ ಸಾಂಸ್ಥಿಕ ಕಾರ್ಯವಿಧಾನವಾಗಿ ವಿಕಸನಗೊಂಡಿರುವ ಒಂದು ಉಪಕ್ರಮ. ಉದ್ಯೋಗ ಸೃಷ್ಟಿ ಮತ್ತು ಯುವ ಸಬಲೀಕರಣ ಕೇಂದ್ರದ ಆದ್ಯತೆಯಾಗಿದೆ ಎಂದು ಅವರು ಬಣ್ಣಿಸಿದ್ದಾರೆ.

18 ನೇ ಆವೃತ್ತಿಯ ರೋಜ್‌ಗಾರ್ ಮೇಳದಲ್ಲಿ ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಿಗೆ ಆಯ್ಕೆಯಾದ 61,000 ಕ್ಕೂ ಹೆಚ್ಚು ಅಭ್ಯರ್ಥಿಗಳಿ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಅವರು ಉದ್ಯೋಗ ಸೃಷ್ಟಿ ಮತ್ತು ಯುವ ನೇತೃತ್ವದ ಬೆಳವಣಿಗೆಯ ಮೇಲೆ ಕೇಂದ್ರದ ಗಮನ ಹರಿಸುತ್ತಿದೆ ಎಂದು ಹೇಳಿದರು.
"ಕಳೆದ ಕೆಲವು ವರ್ಷಗಳಿಂದ, ರೋಜ್‌ಗಾರ್ ಮೇಳ ಒಂದು ಸಂಸ್ಥೆಯಾಗಿ ಮಾರ್ಪಟ್ಟಿದೆ. ವೇದಿಕೆಯ ಮೂಲಕ, ಲಕ್ಷಾಂತರ ಯುವಕರು ಈಗಾಗಲೇ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ನೇಮಕಾತಿ ಪತ್ರಗಳನ್ನು ಪಡೆದಿದ್ದಾರೆ" ಎಂದು ಹೇಳಿದ್ದಾರೆ

ಕೇಂದ್ರ ಸರ್ಕಾರ ಹಲವಾರು ದೇಶಗಳೊಂದಿಗೆ ವ್ಯಾಪಾರ ಮತ್ತು ಚಲನಶೀಲತೆ ಒಪ್ಪಂದಗಳಿಗೆ ಸಹಿ ಹಾಕುತ್ತಿದೆ, ಇದು ಭಾರತೀಯ ಯುವಕರಿಗೆ ಹೊಸ ಮಾರ್ಗಗಳನ್ನು ತೆರೆಯುತ್ತಿದೆ. "ಈ ಒಪ್ಪಂದಗಳು ನಮ್ಮ ಯುವ ಕಾರ್ಯಪಡೆಗೆ ಬಹು ಅವಕಾಶಗಳನ್ನು ಸೃಷ್ಟಿಸುತ್ತಿವೆ" ಎಂದು ತಿಳಿಸಿದ್ದಾರೆ.

ಆಡಳಿತವನ್ನು ಸರಳೀಕರಿಸುವ ಮತ್ತು ಆರ್ಥಿಕ ಚಟುವಟಿಕೆ ಹೆಚ್ಚಿಸುವ ಗುರಿಯೊಂದಿಗೆ ಸರ್ಕಾರ ಮುನ್ನೆಡೆಯುತ್ತಿದೆ. "ದೇಶ ಸುಧಾರಣಾ ಕ್ರಮಕ್ಕೆ ಮುಂದಾಗಿದೆ. ಜೀವನವನ್ನು ಸುಲಭಗೊಳಿಸುವುದು ಮತ್ತು ವ್ಯವಹಾರವನ್ನು ಸುಲಭಗೊಳಿಸುವುದು ಇದರ ಉದ್ದೇಶವಾಗಿದೆ" ಎಂದು ಅವರು ಹೇಳಿದ್ದಾರೆ.

**11 ಲಕ್ಷಕ್ಕೂ ಹೆಚ್ಚು ಉದ್ಯೋಗ ನೀಡಿಕೆ–**
ಪ್ರಧಾನ ಮಂತ್ರಿ ಕಚೇರಿಯ ಅಧಿಕೃತ ಹೇಳಿಕೆಯ ಪ್ರಕಾರ, ದೇಶಾದ್ಯಂತ ನಡೆದ ರೋಜ್‌ಗಾರ್ ಮೇಳಗಳ ಮೂಲಕ



ಇದುವರೆಗೆ 11 ಲಕ್ಷಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ನೀಡಲಾಗಿದೆ. ಈ ಉಪಕ್ರಮ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವ ಮತ್ತು ಆ ದೃಷ್ಟಿಕೋನವನ್ನು ಕಾಂಕ್ರೀಟ್ ಫಲಿತಾಂಶಗಳಾಗಿ ಭಾಷಾಂತರಿಸುವ ಪ್ರಧಾನ ಮಂತ್ರಿ ಬದ್ಧತೆಗೆ ಸಾಕ್ಷಿಯಾಗಿದೆ ಎಂದಿದೆ.18ನೇ ರೋಜ್‌ಗಾರ್ ಮೇಳವನ್ನು ದೇಶಾದ್ಯಂತ 45 ಸ್ಥಳಗಳಲ್ಲಿ ಆಯೋಜಿಸಲಾಗಿತ್ತು. ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳು ಭಾರತ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರಲಿದ್ದಾರೆ

ಗೃಹ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಹಣಕಾಸು ಸೇವೆಗಳ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆ ಸೇರಿದಂತೆ ಪ್ರಮುಖ ವಲಯಗಳಲ್ಲಿ ವ್ಯಾಪಕ ಶ್ರೇಣಿಯ ಪಾತ್ರಗಳಿಗೆ ಹೊಸದಾಗಿ ನೇಮಕಗೊಂಡವರನ್ನು ಆಯ್ಕೆ ಮಾಡಲಾಗಿದೆ.

ರಕ್ಷಣಾ ಸಚಿವಾಲಯ, ಪರಮಾಣು ಇಂಧನ ಇಲಾಖೆ ಮತ್ತು ಪಿಜಿಸಿಐಎಲ್ ಮತ್ತು ಎಚ್‌ಪಿಸಿಎಲ್‌ನಂತಹ ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿಯೂ ನೇಮಕಾತಿ ಮಾಡಿಕೊಳ್ಳಲಾಗಿದೆ. ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ ಕಾನ್‌ಸ್ಟೆಬಲ್‌ಗಳು, ನರ್ಸಿಂಗ್ ಅಧಿಕಾರಿಗಳು, ಜೂನಿಯರ್ ಅಸೋಸಿಯೇಟ್‌ಗಳು, ಸಹಾಯಕ ಪ್ರಾಧ್ಯಾಪಕರು, ವೈಜ್ಞಾನಿಕ ಸಹಾಯಕರು, ಜೂನಿಯರ್ ಎಂಜಿನಿಯರ್‌ಗಳು, ಕಾರ್ಯನಿರ್ವಾಹಕ ತರಬೇತಿದಾರರು ಮತ್ತು ಇತರ ತಾಂತ್ರಿಕ ಅಧಿಕಾರಿಗಳು ನೇಮಕ ಮಾಡಿಕೊಳ್ಳಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ನಿರ್ದೇಶಕ ವಿಕ್ರಂ– ಪುತ್ರಿಯ ವಿರುದ್ಧ 13 ಕೋಟಿ ವಂಚನೆ ಪ್ರಕರಣ ದಾಖಲು

**ಮುಂಬೈ,ಜ.24–**ಖ್ಯಾತ ಚಲನಚಿತ್ರ ನಿರ್ದೇಶಕ–ನಿರ್ಮಾಪಕ ವಿಕ್ರಮ್ ಭಟ್ ಮತ್ತು ಅವರ ಪುತ್ರಿ ಕೃಷ್ಣ ಭಟ್ ಕಾನೂನು ತೊಂದರೆಯನ್ನು ಎದುರಿಸುತ್ತಿದ್ದಾರೆ. ಮುಂಬೈನ ವರ್ಸೋವಾ ಪೊಲೀಸ್ ಠಾಣೆಯಲ್ಲಿ ಅವರ ವಿರುದ್ಧ ವಂಚನೆಯ ಗಂಭೀರ ಪ್ರಕರಣ ದಾಖಲಾಗಿದೆ. ಹೂಡಿಕೆಯ ಹೆಸರಿನಲ್ಲಿ ಉದ್ಯಮಿಯೊಬ್ಬರಿಗೆ ಕೋಟ್ಯಂತರ ರೂಪಾಯಿ ವಂಚಿಸಿದ ಆರೋಪ ಅವರ ಮೇಲಿದೆ.

ಚಲನಚಿತ್ರೋದ್ಯಮದಲ್ಲಿನ ಹೂಡಿಕೆಗಳು ಮತ್ತು ಗಣನೀಯ ಲಾಭದ ಭರವಸೆಗೆ ಸಂಬಂಧಿಸಿದೆ ಎಂದು ಹೇಳಲಾಗುವ ಈ ಪ್ರಕರಣವು ಈಗ ಪ್ರಮುಖ ಕಾನೂನು ತಿರುವು ಪಡೆದುಕೊಂಡಿದೆ.

30 ಕೋಟಿ (ಸುಮಾರು $1.35 ಬಿಲಿಯನ್) ವಂಚನೆ ಪ್ರಕರಣದಲ್ಲಿ ಈಗಾಗಲೇ ಜೈಲು ಶಿಕ್ಷೆ ಅನುಭವಿಸುತ್ತಿರುವ ಅವರು ಮತ್ತು ಅವರ ಮಗಳ ವಿರುದ್ಧ ಈಗ 13.5 ಕೋಟಿ (ಸುಮಾರು $1.35 ಬಿಲಿಯನ್) ವಂಚನೆ ಆರೋಪ ಹೊರಿಸಲಾಗಿದೆ. ವರ್ಸೋವಾ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ವನ್ನು ಈಗ ಆರ್ಥಿಕ ಅಪರಾಧಗಳ ವಿಭಾಗವು ತನಿಖೆ ನಡೆಸುತ್ತಿದೆ.

ವರದಿಗಳ ಪ್ರಕಾರ, ವಿಕ್ರಮ್ ಭಟ್ ಮತ್ತು ಅವರ ಮಗಳು ಚಲನಚಿತ್ರಗಳಲ್ಲಿ ಹೂಡಿಕೆ ಮಾಡಿದ್ದಕ್ಕಾಗಿ ಉದ್ಯಮಿಯೊಬ್ಬರಿಗೆ ಹೆಚ್ಚಿನ ಲಾಭವನ್ನು ಭರವಸೆ ನೀಡಿದ್ದಾರೆ ಎಂದು ಆರೋಪಿ



ಸಲಾಗಿದೆ. ಅವರು ಉದ್ಯಮಿಯಿಂದ 13.5 ಕೋಟಿ ಪಡೆದಿದ್ದರು, ಆದರೆ ಲಾಭ ಅಥವಾ ಮೂಲ ಮೊತ್ತವನ್ನು ಸಮಯಕ್ಕೆ ಸರಿಯಾಗಿ ಹಿಂತಿರುಗಿಸಲಾಗಿಲ್ಲ. ದೂರಿನ ಆಧಾರದ ಮೇಲೆ, ಆರ್ಥಿಕ ಅಪರಾಧಗಳ ವಿಭಾಗವು ಇಬ್ಬರ ವಿರುದ್ಧ ಪ್ರಕರಣ ದಾಖಲಿಸಿದೆ ಮತ್ತು ಹೆಚ್ಚಿನ ತನಿಖೆ ನಡೆಸುತ್ತಿದೆ.

ಪ್ರಸ್ತುತ, ಆರ್ಥಿಕ ಅಪರಾಧಗಳ ವಿಭಾಗವು 13.5 ಕೋಟಿ ರೂ.ಗಳ ಹೊಸ ಪ್ರಕರಣದ ಬಗ್ಗೆ ಕೂಲಂಕಷ ತನಿಖೆ ನಡೆಸುತ್ತಿದ್ದು, ಇದರ ಆಧಾರದ ಮೇಲೆ ಮುಂದಿನ ಕ್ರಮವನ್ನು ನಿರ್ಧರಿಸಲಾಗುತ್ತದೆ.

# ಆಳಂದ ತಾಲೂಕಿನ ಬೌದ್ಧ ಧಮ್ಮ ಸಮ್ಮೇಳನ

**ಕಲಬುರಗಿ:ಜ.24:**ಬುದ್ಧ ಮತ್ತು ಬೌದ್ಧಧರ್ಮದ ಪ್ರಭಾವದಿಂದ ಜಗತ್ತಿನಾದ್ಯಂತ ದೇಶಗಳು, ರಾಜರು, ಲಕ್ಷಾಂತರ ಜನರು ಅಸಂಖ್ಯಾತ ವ್ಯಕ್ತಿಗಳು ತಮ್ಮ ನಕರಾತ್ಮಕ ಸನಾತನ ಚಿಂತನೆ, ಸಂಸ್ಕಾರ ಸಂಸ್ಕೃತಿಗಳನ್ನು ತೊರೆದು ಬೌದ್ಧ ಧರ್ಮ ಅಪ್ಪಿಕೊಂಡು ಸಕಾರಾತ್ಮಕವಾಗಿ ಸರ್ವಾಂಗೀಣ ಉನ್ನತಿ ಸಾಧಿಸಿದ್ದಾರೆ. ಸಾಮ್ರಾಟ್ ಅಶೋಕ ಚಕ್ರವರ್ತಿಯಿಂದ ಹಿಡಿದು ಶೋಷಿತ ಜನಾಂಗಗಳ ಸೇನಾನಿ ಭಾರತ ರತ್ನ ಡಾ. ಬಾಬಾಸಾಹೇಬ ಅಂಬೇಡ್ಕರ ರವರೆಗೆ ಕಾಲ ಚಕ್ರ ಉರುಳಿ ಬೌದ್ಧ ಧರ್ಮ ಹಲವಾರು ಏಳು–ಬೀಳುಗಳ ಮಧ್ಯೆ ಮತ್ತೆ ಪುನರುತ್ಥಾನ ಪಡೆದಿದೆ.

ಭಾರತೀಯ ಸಮಾಜವು ಶೋಷಣೆ, ತಾರತಮ್ಯ, ಜಾತಿಯತೆ, ಅಸ್ಪೃಶ್ಯತೆಯಿಂದ ಘಾತುಕ ರೀತಿಯಲ್ಲಿ ರೂಪುಗೊಂಡಿರುವುದಂಥದ್ದು ಮನುಷ್ಯರು ಇತರ ಮನುಷ್ಯರನ್ನು ಮುಟ್ಟಿಸಿಕೊಳ್ಳಲು ಕೂಡ ಹೇಸಿದ ದೇಶವಿದು ಅನಿಷ್ಟ ಪರಂಪರೆಯನ್ನು ತೊಡೆದು ಹಾಕಲು ಇದುವರೆಗೆ ನೂರಾರು ಸಂತರು, ಕವಿಗಳು, ದಾಸರು, ಸಮಾಜ ಸುಧಾರಕರು, ಧುರೀಣರು ಪ್ರಯತ್ನಿಸುತ್ತಲೆ ಬಂದಿದ್ದಾರೆ.

ಸುಮಾರು 2570 ವರ್ಷಗಳ ಹಿಂದೆ ಮಹಾತ್ಮಾ ಗೌತಮ ಬುದ್ಧ ತನ್ನ ಮಾನವಿಯ ಚಿಂತನೆಯನ್ನು ಬಿತ್ತಿದ ಆ ಕಾಲದ ರಾಜ. ಮಹಾರಾಜ ಚಕ್ರವರ್ತಿಗಳು ಸಹ ಬುದ್ಧನ ಬೋಧನೆಗೆ ಕಿವಿಗೊಟ್ಟರು ಅದು ತಮ್ಮ ಆಡಳಿತದಲ್ಲಿ ಎಲ್ಲಾ ಜನರಿಗೆ ಪೂರ್ಣ ಹಿತವನ್ನು ಉಂಟುಮಾಡುತ್ತದೆ ಎಂಬುದನ್ನು ಮನಗಂಡು, ಬೌದ್ಧ ಧಮ್ಮವನ್ನು ನಿರ್ಮಿಸಿದರು. ಕ್ರಮೇಣ ಬುದ್ಧನ ತತ್ವಗಳು ಪ್ರಪಂಚದ ಅನೇಕ ದೇಶಗಳು ಅಳವಡಿಸಿಕೊಂಡು ಮುಂದುವರೆದ ದೇಶಗಳಾಗಿ ಹೊರ ಹೊಮ್ಮಿದವು.

ಆದ ಕಾರಣ ಸಮಾಜದಲ್ಲಿ ಸಮಾನತೆ ಬಯಸಿ ಸಮ ಸಮಾಜ ನಿರ್ಮಾಣ ಮಾಡಲು ಸಂಕಲ್ಪ ಮಾಡಿ ಆಳಂದ ಪಟ್ಟಣದಲ್ಲಿ ದಿನಾಂಕ: 25–1–2026 ರಂದು 1–00 ಗಂಟೆಗೆ ಸ್ಥಳ : ಅಶೋಕ ಮಾರುಕಟ್ಟೆ ಮೈದಾನ, ಆಳಂದ, ತಾ. ಆಳಂದ, ಜಿ. ಕಲಬುರಗಿ ಧಮ್ಮ ಸಮ್ಮೇಳನ ಮಾಡಲು ತೀರ್ಮಾನಿಸಲಾಗಿದೆ.

ಈ ಸಭೆಯ ಸಮ್ಮೇಳನ ಸಾನಿಧ್ಯವನ್ನು ಪೂಜ್ಯ ಭಂತೆ ಧಮ್ಮಾನಂದ ಮಹಾಥೇರೋ ಅಣದೂರ ಬುದ್ಧವಿಹಾರ, ಬೀದರ, ಅಧ್ಯಕ್ಷತೆಯನ್ನು ಪೂಜ್ಯ ಭಂತೆ ಬೋಧಿದತ್ತ ಮಹಾಥೇರೋ, ನಳಂದ ವಿಶ್ವವಿದ್ಯಾನಿಲಯ, ಚಾಮರಾಜ ನಗರ. ಸಮ್ಮೇಳನದ ಮಾರ್ಗದರ್ಶಕರಾದ ಪೂಜ್ಯಭಂತೆ ವರಜ್ಯೋತಿ ಥೇರೋ, ಅಣದೂರ ಬುದ್ಧವಿಹಾರ, ಬೀದರ.

**ಸಮ್ಮೇಳನದ ಉದ್ಘಾಟಕರಾಗಿ:** ಆಯುಷ್ಮಾನ ಪ್ರಿಯಾಂಕ ಎಂ. ಖರ್ಗೆ, ಕರ್ನಾಟಕ ಸರ್ಕಾರದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ



ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು ಆಗಮಿಸುವರು. ಸಮ್ಮೇಳನದ ಬಹಿರಂಗ ಸಭೆ ಅಧ್ಯಕ್ಷತೆಯನ್ನು ಆಯುಷ್ಮಾನ ಬಿ. ಆರ್. ಪಾಟೀಲ ಆಳಂದ ಶಾಸಕರು ಹಾಗೂ ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷರು ಆಗಮಿಸುವರು.

ಧಮ್ಮದ ಕುರಿತು ಉಪನ್ಯಾಸ ಆಯುಷ್ಮಾನ ಡಾ. ರಾಜರತ್ನ ಅಂಬೇಡ್ಕರ ರಾಷ್ಟ್ರೀಯ ಅಧ್ಯಕ್ಷರು ಭಾರತೀಯ, ಬೌದ್ಧ ಮಹಾಸಭಾ, ಮುಂಬಯಿ ಇವರು ಆಗಮಿಸುವರು. ರಾಷ್ಟ್ರ ಧ್ವಜಾರೋಹಣವನ್ನು ಆಯುಷ್ಮಾನ ಆರ್.ಕೆ. ಪಾಟೀಲ ಕೆ.ಎಂ.ಎಫ್. ಅಧ್ಯಕ್ಷರು, ಕಲಬುರಗಿ, ಯಾದಗಿರ, ಬೀದರ ಇವರು ನೆರವೇರಿಸುವರು. ನೀಲಿ ಬಾವುಟ ಧ್ವಜಾರೋಹಣ: ಆಯುಷ್ಮಾನ ಸುಭಾಷ ಆರ್. ಗುತ್ತೇದಾರ ಮಾಜಿ ಶಾಸಕರು ಆಳಂದ ಇವರು ನೆರವೇರಿಸುವರು. ಪಂಚಶೀಲ ಧ್ವಜಾರೋಹಣ: ಆಯುಷ್ಮಾನ ಬಸಲಿಂಗಪ್ಪ ಗಾಯಕವಾಡ ಇವರು ನೆರವೇರಿಸುವರು. ಆಯುಷ್ಮಾನ ಸಿದ್ಧಾರ್ಥ ಚಿಮ್ಮಾ ಇದಲಾಯಿ ಹಾಗೂ ಸಂಗಡಿಗರಿಂದ ಧಮ್ಮಗೀತೆ ಪ್ರಸ್ತುತಪಡಿಸುವುದು.

ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆಗೈದ ಗಣ್ಯರಿಗೆ ಸನ್ಮಾನಿಸಲಾಗುವುದು. ಈ ಕಾರ್ಯಕ್ರಮಕ್ಕೆ ಸುಮಾರು 10 ಸಾವಿರ ಮೇಲ್ಪಟ್ಟ ಜನರು ಬರುವ ಸಾಧ್ಯತೆ ಇದೇ ಕಾರಣ ದಯಾಳುಗಳಾದ ತಾವು ತಮ್ಮ ಮುದ್ರಣ ಮಾಧ್ಯಮ ಹಾಗೂ ಟಿವಿ ಮಾಧ್ಯಮದವರು ಎಲ್ಲರೂ ಬಂದು ಕಾರ್ಯಕ್ರಮದ ಭಾವಚಿತ್ರ ಹಾಗೂ ಸುದ್ದಿಯನ್ನು ಬಿತ್ತರಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಮನವಿ ಮಾಡಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಸರಳ ವಿವಾಹಕ್ಕೆ ಪ್ರೋತ್ಸಾಹಧನ

**ರಾಯಚೂರು,ಜ.24–** 2025–26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 222 ರಲ್ಲಿ ಘೋಷಿಸಿರುವಂತೆ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದ ವದರ ಸರಳ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50000 ರೂ. ಮತ್ತು ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರುಗಳಿಗೆ ಪ್ರೋತ್ಸಾಹ ಹಾಗೂ ವಿವಾಹದ ಖರ್ಚು–ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 5000 ರೂ.ಗಳನ್ನು ನೀಡುವ ಕಾರ್ಯಕ್ರಮವನ್ನು ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿದೆ.ರಾಯಚೂರು ಜಿಲ್ಲೆ ಮಾನವಿ ಪಟ್ಟಣದಲ್ಲಿ ದಾರುಸ್ಸಲಾಮ್ ಫೌಂಡೇಷನ್ ಟ್ರಸ್ಟ್ ಮಾನವಿ, ಈ ಸಂಸ್ಥೆಯವರು ಆಯೋಜಿಸಿರುವ ಕಾರ್ಯಕ್ರಮದಲ್ಲಿ ಸರಳ ವಿವಾಹ ಯೋಜನೆಯಡಿ ಅರ್ಜಿ ಸಲ್ಲಿಸಿದ ಒಟ್ಟು 111 ಜೋಡಿಗಳ ವಿವಾಹ ಕಾರ್ಯಕ್ರಮವು ದಿನಾಂಕ:18.01.2026 ರಂದು ನಡೆಯಿತು.ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ 111 ಜೋಡಿಗಳಿಗೆ ಪ್ರತಿ ಜೋಡಿಗೆ 50000 ರೂ. ಮತ್ತು ಸಾಮೂಹಿಕ ವಿವಾಹಗಳನ್ನು ಏರ್ಪಡಿಸಿರುವ ಆಯೋಜಕರುಗಳಿಗೆ ಪ್ರೋತ್ಸಾಹ ಹಾಗೂ ವಿವಾಹದ ಖರ್ಚು–ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 5000 ರೂ.ಗಳನ್ನು ನೀಡಲಾಗುವುದು. ಹಾಗೂ ಜಿಲ್ಲೆಗೆ ಈ ಯೋಜನೆಯಡಿ ಪ್ರಸ್ತುತ 200 ಫಲಾನುಭವಿಗಳಿಗೆ ಭೌತಿಕ ಗುರಿಯನ್ನು ನಿಗಧಿಪಡಿಸಲಾಗಿದ್ದು, ಅರ್ಹ ಅಲ್ಪಸಂಖ್ಯಾತ ಸಮುದಾಯದ ಫಲಾನುಭವಿಗಳು ಅರ್ಜಿ ಸಲ್ಲಿಸಿ ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ಈ ಕಾರ್ಯಕ್ರಮದಲ್ಲಿ ಸಚಿವರು, ಶಾಸಕರು ಹಾಗೂ ಇತರೆ ರಾಜಕೀಯ ಮುಖಂಡರು, ಗಣ್ಯರು ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ಮತ್ತು ದಾರುಸ್ಸಲಾಮ್ ಫೌಂಡೇಷನ್ ಟ್ರಸ್ಟ್ ಮಾನವಿ, ಈ ಸಂಸ್ಥೆಯ ಅಧ್ಯಕ್ಷರು/ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

**ಸೂಚನೆ:** ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್‌ಲೈನ್‌ನಲ್ಲಿ ನಡೆಸಲಾಗುತ್ತಿದ್ದು, ಅದಾಗ್ಯೂ ಕೆಲವು ಸ್ವಯಂ ಸೇವೆ ಸಂಸ್ಥೆಗಳು ಮತ್ತು ಅರ್ಜಿದಾರರು ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಲು ತೊಂದರೆ ಉಂಟಾದಲ್ಲಿ ಅಂತಹ ಸಂದರ್ಭದಲ್ಲಿ ಮಾತ್ರ ಅನುಮೋದಿತ ಆಫ್‌ಲೈನ್ ಅರ್ಜಿ ನಮೂನೆಗಳನ್ನು ಜಿಲ್ಲಾ/ ತಾಲ್ಲೂಕು ಕಚೇರಿಯಿಂದ ಪಡೆದು ಸಲ್ಲಿಸುವಂತೆ ತಿಳಿಸಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರ: ರಾಯಚೂರು 9731028420, ದೇವದುರ್ಗ 9148233616, ಲಿಂಗಸುಗೂರು 9886447863, ಮಾನವಿ 887334758 ಹಾಗೂ ಸಿಂಧನೂರು 8217621732ಗೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE